ಸಂಪುಟ : 10 ಸಂಚಿಕೆ: 144 ಪುಟ : 4+2 ಬೆಲೆ: 3.00 ಶುಕ್ರವಾರ ಜುಲೈ 11 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 144 Pages : 4+2 Price : 3.00 Friday July 11 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಭದ್ರಾ ಜಲಾಶಯದಿಂದ ನೀರು ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

ಭದ್ರಾ ನದಿ ದಂಡೆಯ ತಗ್ಗು ಪ್ರದೇಶದಲ್ಲಿ ವಾಸಿಸುವ ಜನರಿಗೆ ಭದ್ರಾ ಜಲಾಶಯದ ಪ್ರದೇಶದಲ್ಲಿ ಮುಂಗಾರು ಮಳೆ ಪ್ರಾರಂಭವಾಗಿದ್ದು, ಒಳಹರಿವಿನ ಪ್ರಮಾಣ 20000–25000 ಕ್ಯೂಸೆಕ್ಸ್ ಇದ್ದು, ಯಾವ ಸಮಯದಲ್ಲಾದರೂ ಜಲಾಶಯ ಭರ್ತಿಯಾಗುವ ಸಾಧ್ಯತೆ ಇದೆ.

ಆಣಿಕಟ್ಟು ಸುರಕ್ಷತೆ ದೃಷ್ಟಿಯಿಂದ ಹೆಚ್ಚುವರಿ ನೀರನ್ನು Spill Way Gate ಮುಖಾಂತರ ನದಿಗೆ ಬಿಡಲಾಗುವುದು. ಮತ್ತು ತಗ್ಗು ಪ್ರದೇಶದಲ್ಲಿ ವಾಸಿಸುವ ಜನರು ಮುಂಜಾಗ್ರತೆಯಾಗಿ ಸುರಕ್ಷಿತ ಸ್ಥಳಗಳಿಗೆ ತೆರಳಬೇಕು. ಜಲಾಶಯದ ಸುರಕ್ಷತೆ ದೃಷ್ಟಿಯಿಂದ ನೀರಿನ ಸಂಗ್ರಹಣೆ ಕುರಿತು Rule Curve ಪಾಲನೆ ಮಾಡಲಾಗುತ್ತಿದೆ. ರೂಲ್ ಕರ್ವ ಪ್ರಕಾರ ಜಲಾಶಯದಲ್ಲಿರುವ ನೀರಿನ ಸಂಗ್ರಹ ನಿಗದಿತ ಪ್ರಮಾಣಕ್ಕಿಂತ ಹೆಚ್ಚಾದಲ್ಲಿ ಹೆಚ್ಚುವರಿ ನೀರನ್ನು ಹೊರ ಬಿಡಬೇಕಾಗಿರುತ್ತದೆ. ಅದರಂತೆ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದ್ದು, ಹೆಚ್ಚುವರಿ ನೀರನ್ನು ನದಿಗೆ ಹರಿಸಲಾಗುತ್ತಿದೆ. ಭದ್ರಾ ನದಿಯ ಎಡ ಮತ್ತು ಬಲ ದಂಡೆಯ ಉದ್ದಕ್ಕೂ ತಗ್ಗು ಪ್ರದೇಶದಲ್ಲಿ ವಾಸಿಸುವ ಜನರು ಮುಂಜಾಗ್ರತೆಯಾಗಿ ಸುರಕ್ಷಿತ ಸ್ಥಳಗಳಿಗೆ ಹೋಗಬೇಕಾಗಿ ನದಿ ಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದು, ಜಾನುವಾರುಗಳನ್ನು ನದಿ ಪಾತ್ರದಲ್ಲಿ ಮೇಯಿಸುವುದನ್ನು ನಿಷೇಧಿಸಲಾಗಿದೆ. ಸಾರ್ವಜನಿಕರು ಸಹಕರಿಸಬೇಕೆಂದು ಕರ್ನಾಟಕ ನೀರಾವರಿ ನಿಗಮ ನಿಯಮಿತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೋಮಾ ಪ್ರವೇಶದ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಇರುವ ಮೊದಲ ವರ್ಷದ ಡಿಪ್ಲೋಮಾ ಸೀಟುಗಳಿಗೆ ಹಾಗೂ 2ವರ್ಷಗಳ ಐ.ಟಿ.ಐ. ದ್ವಿತೀಯ ಪಿ.ಯು.ಸಿ. (ವಿಜ್ಞಾನ) ಪಾಸಾದ ವಿದ್ಯಾರ್ಥಿಗಳಿಗೆ 3ನೇ ಸೆಮಿಸ್ಟರ್ ಲ್ಯಾಟರಲ್ ಎಂಟ್ರಿ ಖಾಲಿ ಉಳಿದಿರುವ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ ಆಫ್–ಲೈನ್ ಮೂಲಕ ಡಿಪ್ಲೋಮಾ ಪ್ರವೇಶ ಪಡೆಯಲು ಜುಲೈ 15 ರವರಗೆ ಅಂತಿಮ ದಿನಾಂಕವನ್ನು ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಚೇರಿ ಅವಧಿಯಲ್ಲಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಹರಾಜು ವಿಲೇವಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಉಗ್ರಾಣದಲ್ಲಿರುವ ಮತ್ತು ವಿವಿಧ ವಿಭಾಗಗಳಲ್ಲಿರುವ ವಿವಿಧ ಸ್ಕ್ರಾಪನ್ನು ಬಹಿರಂಗ ಹರಾಜಿನ ಮೂಲಕ ವಿಲೇವಾರಿ ಮಾಡಲು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಕುರ್ತಕೋಟಿ ತಾ: ಗದಗದಲ್ಲಿ ಜುಲೈ 25 ರಂದು ಮುಂಜಾನೆ 11 ಕ್ಕೆ ಹರಾಜು ಪ್ರಕ್ರಿಯೆ ಕೈಗೊಳ್ಳಲಾಗುವುದು. ಆಸಕ್ತಿಯುಳ್ಳ ಖರೀದಿದಾರರು ಹರಾಜಿನಲ್ಲಿ ಭಾಗವಹಿಸಬಹುದು.

ಹರಾಜಿನಲ್ಲಿ ಭಾಗವಹಿಸುವವರು ಹರಾಜಿಗೆ ಇರಿಸಲಾದ ವಿವಿಧ ಸ್ಕ್ರಾಪ್‌ನ್ನು ಕಚೇರಿ ಸಮಯದಲ್ಲಿ ರಜಾ ದಿನಗಳನ್ನು ಹೊರತುಪಡಿಸಿ ಖುದ್ದಾಗಿ ಬಂದು ಪರಿಶೀಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಯನ್ನು ಕಚೇರಿಯಿಂದ ಪಡೆಯಬಹುದು ಎಂದು ಕುರ್ತಕೋಟಿ ವಿರುಪಾಕ್ಷಪ್ಪ ಊಳವಪ್ಪ ಬೆಟಗೇರಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇ–ಪೌತಿ ವಾರಸಾ ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ನಿಮ್ಮ ಮನೆ ಬಾಗಿಲಿಗೆ ‘ಇ–ಖಾತಾ’ ಸೌಲಭ್ಯ

■ವಿಜಯಸಾಕ್ಷಿ ಸುದ್ದಿ, ಡಂಬಳ

ಸರ್ಕಾರದಿಂದ ಪಿತ್ರಾರ್ಜಿತ ಆಸ್ತಿ ಹಕ್ಕನ್ನು ರೈತರ ಹೆಸರಿಗೆ ವರ್ಗಾವಣೆ ಮಾಡಿಕೊಳ್ಳುವ ಪ್ರಕ್ರಿಯೆಯನ್ನು ಸರಳೀಕೃತಗೊಳಿಸಲು ಕಂದಾಯ ಇಲಾಖೆಯಿಂದ ಇ–ಪೌತಿ ಆಂದೋಲನ ನಡೆಸಲಾಗುತ್ತಿದೆ. ಗದಗ ಜಿಲ್ಲೆಯಲ್ಲಿ 70 ಸಾವಿರ ಪೌತಿ (ಮರಣ) ಖಾತೆ ಹೊಂದಿದ ಪ್ರಕರಣಗಳಿದ್ದು, ಈ ಎಲ್ಲಾ ರೈತರು ಇ–ಖಾತಾ ಹೊಂದಲು ತಮ್ಮ ಮನೆ ಬಾಗಿಲಿಗೆ ಬರುತ್ತಿದ್ದು, ಇದರ ಸಂಪೂರ್ಣ ಸೌಲಭ್ಯವನ್ನು ಪಡೆದುಕೊಳ್ಳಲು ಮುಂದಾಗಬೇಕು ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ಹೇಳಿದರು.

ಡಂಬಳ ಹೋಬಳಿಯ ವೆಂಕಟಾಪೂರ ಗ್ರಾಮದ ಅನ್ನದಾನೀಶ್ವರ ಮಠದ ಆವರಣದಲ್ಲಿ ಕಂದಾಯ ಇಲಾಖೆ ಮೂಲಕ ಇ–ಪೌತಿ ವಾರಸಾ ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕೃಷಿ ಜಮೀನಿನ ಮಾಲೀಕರು ಮರಣ ಹೊಂದಿದ ನಂತರ ಪೌತಿ ಮೃತರ ಉತ್ತರಾಧಿಕಾರಿಗಳ ಹೆಸರಿಗೆ ಬದಲಾಗದಿದ್ದರೆ ಅಂತಹ ಜಮೀನು ಸ್ವಾಧೀನ ಹೊಂದಿದ್ದರೂ ಸಹ ಕುಟುಂಬಸ್ಥರಿಗೆ ಜಮೀನು ಅಭಿವೃದ್ಧಿಪಡಿಸಲು,



ಬೆಳೆಸಾಲ, ಕೃಷಿ, ತೋಟಗಾರಿಕೆ ಸೌಲಭ್ಯಗಳು ದೊರೆಯುವುದಿಲ್ಲ. ಬೆಳೆಹಾನಿ ಆದ ವೇಳೆ ಪರಿಹಾರ ಪಡೆಯಲು ದುಸ್ತರವಾಗುತ್ತದೆ. ಹೀಗಾಗಿ ಆಸ್ತಿ ಹಕ್ಕು ವರ್ಗಾವಣೆಗೆ ಇ–ಪೌತಿ ಆಂದೋಲನ ಆರಂಭಿಸಲಾಗಿದೆ ಎಂದರು.

ಕೆಲ ಪ್ರಕರಣದಲ್ಲಿ ಉತ್ತರಾಧಿಕಾರಿಗಳ ತಕರಾರು ಇದ್ದು, ಪೌತಿ ಖಾತೆ ಮಾಡಲು ಒಪ್ಪಿರುವುದಿಲ್ಲ ಎಂದು ಪಹಣಿ ಕಾಲಂ 11ರಲ್ಲಿ ನಮೂದಿಸಲಾಗುತ್ತದೆ. ಹೀಗಾಗಿ ಇ–ಪೌತಿ ಖಾತಾಗೆ ಬೇಕಾದ ವಂಶವೃಕ್ಷ ಮರಣ ಪ್ರಮಾಣದಂತಹ ಇತರ ದಾಖಲೆ ಸಿದ್ಧಪಡಿಸಿಕೊಂಡು ಆಂದೋಲನ ಯಶಸ್ವಿಗೆ

ಇ–ಪೌತಿ ಮಾಡಿಸಿಕೊಳ್ಳಲು ಸಂಬಂಧಿಸಿದವರು ಮೃತರ ಮರಣ ಪ್ರಮಾಣಪತ್ರ, ಗಣಕೀಕೃತ ವಂಶವೃಕ್ಷ ಪ್ರಮಾಣಪತ್ರ, ಆಧಾರ್ ಕಾರ್ಡ್‌ನ್ನು ಗ್ರಾಮಾಡಳಿತಾಧಿಕಾರಿಗಳಿಗೆ ಸಲ್ಲಿಸಬೇಕು. ಅವರು ಕಾನೂನು ಬದ್ಧ ವಾರಸುದಾರರ ಆಧಾರ್ ಇ–ಕೆವೈಸಿ ಮಾಡುತ್ತಾರೆ. ಉತ್ತರಾಧಿಕಾರಿ ಇದ್ದರೆ ಫೋಟೋ ತೆಗೆದು ಆ್ಯಪ್‌ನಲ್ಲಿ ಅಪ್ಲೋಡ್ ಮಾಡುತ್ತಾರೆ. ಮೃತರ ಇನ್ನಿತರ ಯಾವುದೇ ಸರ್ವೇ ನಂಬರ್ ಇದ್ದರೂ ಸೇರ್ಪಡೆ ಮಾಡುತ್ತಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯ ರೈತರು ಸಹಕರಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗೆ ಸಂಬಂಧಿಸಿದಂತೆ ತಹಸೀಲ್ದಾರ, ಉಪತಹಸೀಲ್ದಾರ, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಲು ಮುಂದಾಗಬೇಕು ಎಂದು ಹೇಳಿದರು.

ಮುಂಡರಗಿ ತಹಸೀಲ್ದಾರ ಯರಿಸ್ವಾಮಿ ಪಿ.ಎಸ್. ಮಾತನಾಡಿ, ಮುಂಡರಗಿ ತಾಲೂಕಿನಲ್ಲಿ ಪೋತಿ ಇರುವ ಖಾತೆಗಳು 8000 ಸಾವಿರ, ವೆಂಕಟಾಪೂರ ಗ್ರಾಮದಲ್ಲಿ 180 ಪೋತಿ ಖಾತಾ ಇದ್ದು, ಈಗಾಗಲೇ 20 ಅರ್ಜಿಗಳು ಬಂದಿವೆ. ಅವರಿಗೆ ಶೀಘ್ರದಲ್ಲಿ ಇ–ಖಾತಾ ಮಾಡಿಕೊಡಲಾಗುವುದು. ಇದರ ಸದುಪಯೋಗವನ್ನು ಇನ್ನುಳಿದ ರೈತರು ಪಡೆಯಬೇಕು. ಈಗಾಗಲೇ ಮರಣ ಹೊಂದಿದವರ ಹೆಸರಿನಲ್ಲಿರುವ ವಾರಸುದಾರರಿಗೆ ತಿಳುವಳಿಕೆಯ ಪತ್ರವನ್ನು ನೀಡಿದ್ದು, ಇ–ಖಾತಾ ಹೊಂದಲು ರೈತರು ಮುಂದಾಗಬೇಕು ಎಂದು ಹೇಳಿದರು. ಗದಗ ಚುನಾವಣಾ ತಹಸೀಲ್ದಾರ ಸಂತೋಷ ಹಿರೇಮಠ ಮಾತನಾಡಿದರು.

ಕಾರ್ಯಕ್ರಮದಲ್ಲಿ ಉಪತಸೀಲ್ದಾರ್ ಎಸ್.ಎಸ್. ಬಿಚ್ಚಾಲಿ, ಕಂದಾಯ ನಿರೀಕ್ಷಕ ಪ್ರಭು ಬಾಗಲಿ, ಗ್ರಾಮ ಆಡಳಿತಾಧಿಕಾರಿಗಳಾದ ಪರಸು ಗಾಡಿ, ಲಕ್ಷ್ಮಣ ಗುಡಸಲಮನಿ, ವಿನೋದ ಹೊಸಮಠ, ಗ್ರಾಮದ ರೈತರಾದ ಚನ್ನಬಸಪ್ಪ ಹಳ್ಳಿ, ಕಲ್ಲೇಶ, ಸಂಗಪ್ಪ ಸಣ್ಣದ್ಯಾವಣ್ಣವರ, ಮಂಜುನಾಥ ಕಿನ್ನಾಳ, ಯಲ್ಲಪ ಸಣ್ಣದ್ಯಾವಣ್ಣವರ, ಮಲ್ಲಪ್ಪ ಹೊಸಮನಿ, ಬಸುರಾಜ ಕೊಪ್ಪಳ, ನಿಂಗಪ್ಪ ಹೊಸಮನಿ, ಶಂಕ್ರಪ್ಪ ಹೊಸಮನಿ, ಶುಭಾಸ ಚವಡಿ, ಗ್ರಾಮದ ಹಿರಿಯರು, ಕಂದಾಯ ಇಲಾಖೆ ಸಿಬ್ಬಂದಿ ವರ್ಗದವರು ಇದ್ದರು.

### ಪತ್ರಿಕಾಗೋಷ್ಠಿಯಲ್ಲಿ ನಿವೃತ್ತ ಐಪಿಎಸ್ ಅಧಿಕಾರಿ ಹಾಗೂ ಬಿಜೆಪಿ ಮುಖಂಡ ಬಾಸ್ಕರ ರಾವ್

# ಜೈಲನ್ನು ಸ್ವಚ್ಛಗೊಳಿಸಬೇಕಿರುವುದು ಸರಕಾರದ ಕರ್ತವ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಆಂತರಿಕ ಭದ್ರತೆಯ ಕಾಳಜಿ ಇಲ್ಲದೆ ಇರುವದರಿಂದ ರಾಜ್ಯದಲ್ಲಿ ಭಯೋತ್ಪಾದಕ ಚಟುವಟಿಕೆಗಳು ಹೆಚ್ಚುತ್ತಿವೆ. ಈ ಬಗ್ಗೆ ನಿರ್ಲಕ್ಷ್ಯ ವಹಿಸಿರುವ ಗೃಹ ಸಚಿವ ಜಿ. ಪರಮೇಶ್ವರ ರಾಜೀನಾಮೆ ನೀಡಬೇಕು ಎಂದು ನಿವೃತ್ತ ಐಪಿಎಸ್ ಅಧಿಕಾರಿ ಹಾಗೂ ಬಿಜೆಪಿ ಮುಖಂಡ ಬಾಸ್ಕರ ರಾವ್ ಆಗ್ರಹಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿನ ಭಯೋತ್ಪಾದಕ ಚಟುವಟಿಕೆಗಳ ಬಗ್ಗೆ ರಾಜ್ಯ ಸರಕಾರ ಮಾಡಬೇಕಾದ ಕೆಲಸವನ್ನು ಕೇಂದ್ರ ಸರಕಾರ ಮಾಡುತ್ತಿದೆ. ಇತ್ತೀಚಿಗೆ ಪರಪ್ಪನ ಅಗ್ರಹಾರ ಜೈಲಿನಲ್ಲಿ ಎನ್‌ಐಎ ದಾಳಿ ನಡೆಯಿತು. ದಾಳಿ ಸಂದರ್ಭದಲ್ಲಿ ಜೈಲಿನಲ್ಲಿ ಕೆಲಸ ಮಾಡುವ ಮನೋವೈದ್ಯ, ಎಎಸ್‌ಐ ಹಾಗೂ ಭಯೋತ್ಪಾದಕನ ತಾಯಿಯನ್ನು ಎನ್‌ಐಎ ವಶಕ್ಕೆ ಪಡೆದಿದೆ. ಇದೆಲ್ಲ ತಂತ್ರಜ್ಞಾನದ ಆಧಾರದ ಮೇಲೆ ನಡೆದ ತನಿಖೆಯೇ ಹೊರತು ಎದುರು ಕೂತು ಮಾಡಿದ ತನಿಖೆಯಲ್ಲ ಎಂದು ಹೇಳಿದರು.

ಸರಕಾರಿ ಅಧಿಕಾರಿ ದೇಶವಿರೋಧಿ ಕೃತ್ಯದಲ್ಲಿ ಭಾಗಿಯಾದವರಿಗೆ ಮೊಬೈಲ್ ಕೊಟ್ಟಿದ್ದಾನೆ. ಪೊಲೀಸ್ ಅಧಿಕಾರಿಯೂ ಭಯೋತ್ಪಾದಕರಿಗೆ ಸಿಮ್‌ಕಾರ್ಡ್



ಕೊಟ್ಟಿದ್ದಾನೆ. ಸತೀಶಗೌಡ ಎನ್ನುವನು ದೇಶವಿರೋಧಿ ಚಟುವಟಿಯಲ್ಲಿ ಭಾಗಿಯಾಗಿದ್ದಾನೆ. ಇದೆಲ್ಲ ಕರ್ನಾಟಕ ಆಂತರಿಕ ಭದ್ರತಾ ಇಲಾಖೆಗೆ ತಿಳಿಯದಿರುವುದು ಖೇದಕರ ಸಂಗತಿ ಎಂದರು.

ಆಂತರಿಕ ಭದ್ರತೆ ಬಗ್ಗೆ ಯಾವ ರೀತಿ ಕೆಲಸ ಮಾಡಬೇಕು ಎಂದು ಸರಕಾರ ಸೂಚನೆ ಕೊಡಬೇಕು. ಸಚಿವ ಪರಮೇಶ್ವರ ಹಾಗೂ ಸಿಎಂ ಅವರಿಗೆ ಜೈಲಿನ ಮೇಲೆ ಅಷ್ಟೊಂದು ಸಹಾನುಭೂತಿ ಯಾಕೆ? ಜೈಲನ್ನು ಸ್ವಚ್ಛ ಮಾಡಬೇಕಿರುವುದು ಸರಕಾರದ ಕರ್ತವ್ಯ ಎಂದು ಹೇಳಿದರು.

ಸರಕಾರ ಸಿಮ್‌ಕಾರ್ಡ್ ಪಡೆಯುವದನ್ನು ಸಾಕಷ್ಟು ಸುಲಭ ಮಾಡಿದೆ. ಯಾರು ಬೇಕಾದರೂ ಆಧಾರ್ ಕಾರ್ಡ್ ತೆಗೆದುಕೊಂಡು ಸಿಮ್ ಪಡೆಯಬಹುದು. ಸಚಿವರು ಒಮ್ಮೆಯೂ ಈ ಬಗ್ಗೆ ಸಭೆ ನಡೆಸಿಲ್ಲ. ಇದರಿಂದ ಬಾಂಗ್ಲಾ ನುಸುಳುಕೋರರ ಸಂಖ್ಯೆ ಹೆಚ್ಚಾಗಿದೆ ಎಂದು ಆರೋಪಿಸಿದರು.

ಗೃಹ ಸಚಿವರು ಬೆಂಗಳೂರು ಸೇರಿದಂತೆ ಕರ್ನಾಟಕದ ಜನರ ಜೀವನದ ಜೊತೆ ಚೆಲ್ಲಾಟ ಆಡಬಾರದು. ಸೆಲ್‌ಫೋನ್, ಸಿಮ್, ಕೆವೈಸಿ ಬಗ್ಗೆ ಸರಕಾರ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಇಲ್ಲವಾದಲ್ಲಿ ಗೃಹ ಸಚಿವರು ರಾಜೀನಾಮೆ ಕೊಡಬೇಕು. ಈ ಗೃಹ ಸಚಿವರು ಇನ್ನಷ್ಟು ನಿರ್ಲಕ್ಷ್ಯ ವಹಿಸಿದರೆ ಮುಂದಿನ ದಿನಗಳಲ್ಲಿ ಭಯೋತ್ಪಾದಕರಿಂದ ಬಾಂಬ್ ಸ್ಫೋಟಗೊಂಡರೂ ಅಚ್ಚರಿ ಪಡಬೇಕಾಗಿಲ್ಲ ಎಂದು ಹೇಳಿದರು.

ಕರ್ನಾಟಕದಲ್ಲಿ ಆಂತರಿಕ ಭದ್ರತೆಗೆ ಧಕ್ಕೆ ಬರುವ ಘಟನೆ ನಡೆದಿದ್ದರೂ ಸಲಹೆ–ಸೂಚನೆ ಕೊಡುವಲ್ಲಿ ಗೃಹ ಸಚಿವರು ವಿಫಲರಾಗಿದ್ದಾರೆ. ಈ ಬಗ್ಗೆ ಏನೇ ಕೇಳಿದರೂ ಗೃಹ ಸಚಿವರು ತಿಳಿದುಕೊಂಡು ಹೇಳುತ್ತೇನೆ ಎಂದು ಉಡಾಫೆಯಿಂದ ತಳ್ಳಿಹಾಕುತ್ತಾರೆ. ತುಷ್ಟೀಕರಣ ನೀತಿಯಿಂದಾಗಿ ಕಾನೂನು ಸುವ್ಯಸ್ಥೆ ಮೇಲೆ ಪರಿಣಾಮ ಬೀರುತ್ತಿದೆ. ಜೈಲಿನಲ್ಲಿ ಕಾನೂನುಬಾಹಿರ ಚಟುವಟಕೆಗಳು ನಡೆದಿದ್ದರಿಂದ ಗೃಹ ಸಚಿವರು ಜೈಲಿಗೆ ಭೇಟಿ ಕೊಟ್ಟು ಯಾರೋ ಕಿರಿಯ ಅಧಿಕಾರಿಯನ್ನು ಸಸ್ಪೆಂಡ್ ಮಾಡಿದರು ಎಂದು ಭಾಸ್ಕರ್ ರಾವ್ ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಎಂ.ಎಸ್. ಕರಿಗೌಡ್ರ, ಎಂ.ಎಂ. ಹಿರೇಮಠ, ಲಿಂಗರಾಜ ಪಾಟೀಲ, ರಮೇಶ ಸಜ್ಜಗಾರ ಇದ್ದರು.

### ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾಹಿತಿ

## ಕಾಂಗ್ರೆಸ್ ‘ಯುವಧ್ವನಿ’ ಕಾರ್ಯಕ್ರಮ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜು.12ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ‘ಯುವಧ್ವನಿ’ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಮೂರು ತಿಂಗಳ ಹಿಂದೆ ಯುವ ಕಾಂಗ್ರೆಸ್‌ನ ಆಂತರಿಕ ಚುನಾವಣೆಯಲ್ಲಿ ರಾಜ್ಯಾಧ್ಯಕ್ಷ, ಪ್ರಧಾನ ಕಾರ್ಯದರ್ಶಿ, ಜಿಲ್ಲಾಧ್ಯಕ್ಷರ ಹಾಗೂ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆದಿದ್ದು, ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಜಿಲ್ಲೆಯಲ್ಲಿ ಆಯ್ಕೆಯಾಗಿರುವ ಜಿಲ್ಲಾ ಮಟ್ಟದ, ತಾಲೂಕು ಮಟ್ಟದ, ಬ್ಲಾಕ್ ಮಟ್ಟದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ನಡೆಯಲಿದೆ ಎಂದರು.

ಮಾರ್ಗದರ್ಶಕರಾಗಿ ಗ್ರಾಮೀಣಾಭಿವೃದ್ಧಿ ಹಾಗೂ ಐಟಿಬಿಟಿ ಸಚಿವ ಪ್ರಿಯಾಂಕ ಖರ್ಗೆ, ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಯುವ ಕಾಂಗ್ರೆಸ್ ಸಮಿತಿ ರಾಜ್ಯಾಧ್ಯಕ್ಷ ಮಂಜುನಾಥ ಗೌಡ, ವಿಭಾಗೀಯ ಅಧ್ಯಕ್ಷರಾದ ದೀಪಿಕಾ ಗೌಡ ಭಾಗವಹಿಸುವರು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ, ಮುಖಂಡರಾದ ಅನ್ವರ ನದಾಫ್, ಮಲ್ಲಪ್ಪ ದಂಡಿನ, ಸಂಗಮೇಶ ಕೆರಕಲಮಟ್ಟಿ, ರಾಘವೇಂದ್ರ ದೊಡ್ಡಮನಿ ಇದ್ದರು.

## ಜಿಲ್ಲಾಡಳಿತದಲ್ಲಿ ಹಡಪದ ಅಪ್ಪಣ್ಣನವರ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಹಡಪದ ಅಪ್ಪಣ್ಣನವರ ಜಯಂತಿಯನ್ನು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಗುರುವಾರ ಆಚರಿಸಲಾಯಿತು.

ಶ್ರೀ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಗದಗ ಬೆಟಗೇರಿ



ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರು ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಶ್ರೀ ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾ ಅಧ್ಯಕ್ಷ ಮೋಹನ ಈ ಚಂದಪ್ಪನವರ, ಉಪಾಧ್ಯಕ್ಷ ಕಲ್ಲೇಶಪ್ಪ ಹಡಪದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶೋಕ ವಿ ಪ್ರಭು, ಗದಗ ತಾಲೂಕ ಅಧ್ಯಕ್ಷ ಕಲ್ಲಪ್ಪ ಹಡಪದ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಶರಣಪ್ಪ ಬೆಟಗೇರಿ

## ಗ್ಯಾರಂಟಿ ಯೋಜನೆ ಶೇ. 98ರಷ್ಟು ಯಶಸ್ವಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸರಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿಗಳ ಅನುಷ್ಠಾನವು ಶೇ. 98ರಷ್ಟಾಗಿರುವುದು ಹೆಮ್ಮೆಯ ಸಂಗತಿ ಎಂದು ಗಜೇಂದ್ರಗಡ ತಾಲೂಕಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಶರಣಪ್ಪ ಬೆಟಗೇರಿ ಹೇಳಿದರು.

ಪ.ಪಂ ಸಭಾಭವನದಲ್ಲಿ ಜರುಗಿದ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿಯ ಸಭೆಯಲ್ಲಿ



ಪ್ರಗತಿ ಪರಿಶೀಲನೆ ಮಾಡಿ ಅವರು ಮಾತನಾಡಿದರು.

ಶಾಸಕರಾದ ಜಿ.ಎಸ್. ಪಾಟೀಲರ ನೇತೃತ್ವ ಮತ್ತು ಮಾರ್ಗದರ್ಶನದಲ್ಲಿ ತಾಲೂಕಿನಾದ್ಯಂತ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಯಶಸ್ವಿಯಾಗಿದೆ. ಅದರಲ್ಲಿಯೂ ನರೇಗಲ್ಲ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಈ ಯೋಜನೆ ಇಷ್ಟೊಂದು ಯಶಸ್ವಿಯಾಗಲು ಅಂಗನವಾಡಿ ಕಾರ್ಯಕರ್ತೆಯರು ಬಹುಮಟ್ಟಿಗೆ ಕಾರಣರಾಗಿದ್ದಾರೆ. ಅದಕ್ಕಾಗಿ ಅವರನ್ನು ಸಮಿತಿ ವತಿಯಿಂದ ಅಭಿನಂದಿಸುವುದಾಗಿ ತಿಳಿಸಿದರು.

ಈ ಯೋಜನೆ ತಲುಪದವರು ಪಟ್ಟಣ ಪಂಚಾಯಿತಿ, ಗ್ಯಾರಂಟಿ ಸಮಿತಿಯ ಸದಸ್ಯರನ್ನಾಗಲಿ ಸಂಪರ್ಕಿಸಬೇಕು. ಗೃಹಜ್ಯೋತಿ ಯೋಜನೆಯು ಶೇ. 99.99ರಷ್ಟು ಯಶಸ್ವಿಯಾಗಿದ್ದು, ಇನ್ನು ಯಾರಾದರೂ ಉಳಿದಿದ್ದರೆ ಅಂಥವರು ದಾಖಲೆಗಳೊಂದಿಗೆ

ಅಂಗನವಾಡಿ ಮೇಲ್ವಿಚಾರಕಿ ರಾಧಿಕಾ ಪವಾರ ಮಾಹಿತಿ ನೀಡಿ, ಪಟ್ಟಣದ 6ನೇ ವಾರ್ಡಿನಲ್ಲಿ ಇನ್ನೂ 44 ಫಲಾನುಭವಿಗಳು ಯೋಜನೆಯ ಲಾಭ ಪಡೆದಿಲ್ಲ. ಇದಕ್ಕೆ ಹಲವಾರು ತಾಂತ್ರಿಕ ಕಾರಣಗಳಿದ್ದು, ಇನ್ನು ಕೆಲವೇ ದಿನಗಳಲ್ಲಿ ಅದೆಲ್ಲವನ್ನೂ ಸರಿಪಡಿಸಿ ಅವರಿಗೂ ಯೋಜನೆಯ ಲಾಭ ತಲುಪಿಸಲಾಗುವುದೆಂದರು.

▶▶ 2ನೇ ಪುಟಕ್ಕೆ

## ಗಾಜಾ ಬಿಕ್ಕಟ್ಟು: 10 ಇಸ್ರೇಲ್ ಒತ್ತೆಯಾಳುಗಳ ಬಿಡುಗಡೆಗೆ ಹಮಾಸ್ ಸಮ್ಮತಿ!




■ವಿಜಯಸಾಕ್ಷಿ ಸುದ್ದಿ, ಗಾಜಾ

ಗಾಜಾ ಪಟ್ಟಿ, ಕಳೆದ ಹಲವಾರು ತಿಂಗಳಿಂದ ಕಣ್ಣೀರು ಮತ್ತು ರಕ್ತಕ್ಕೆ ಸಾಕ್ಷಿಯಾದ ಭೂಮಿ. ಇಲ್ಲಿನ ಜನರ ಬದುಕು ಅಕ್ಷರಶಃ ಯಾತನಮಯವಾಗಿದೆ. ಇಂತಹ ದುಃಸ್ಥಿತಿಯ ನಡುವೆ, ಒಂದು ಸಣ್ಣ ಆಶಾಕಿರಣ ಮೂಡಿದೆ: ಹಮಾಸ್ 10 ಇಸ್ರೇಲಿ ಒತ್ತೆಯಾಳುಗಳನ್ನು ಬಿಡುಗಡೆ ಮಾಡಲು ಸಮ್ಮತಿಸಿದೆ. ಇದು ನಿರಂತರ ಬಾಂಬ್ ದಾಳಿ ಮತ್ತು ಮುತ್ತಿಗೆಗೆ ಒಳಗಾದ ಗಾಜಾದಲ್ಲಿ ಕದನ ವಿರಾಮಕ್ಕಾಗಿ ನಡೆಯುತ್ತಿರುವ ಸಂಕೀರ್ಣ ಪ್ರಯತ್ನಗಳ ಭಾಗವಾಗಿದೆ. ಆದರೆ, ಮಾತುಕತೆಗಳು "ಕಠಿಣವಾಗಿ" ಉಳಿದಿವೆ ಎಂದು ಹಮಾಸ್ ಎಚ್ಚರಿಸಿದ್ದು, ಇದಕ್ಕೆ ಇಸ್ರೇಲ್‌ನ "ಮೊಂಡುತನ"ವೇ ಕಾರಣ ಎಂದು ಆರೋಪಿಸಿದೆ.

ಬುಧವಾರವಷ್ಟೇ ಇಸ್ರೇಲಿ ಪಡೆಗಳು ಗಾಜಾದಲ್ಲಿ ಕನಿಷ್ಠ 74 ಅಮಾಯಕ ಜೀವಗಳನ್ನು ಬಲಿ ತೆಗೆದುಕೊಂಡಿವೆ. ಈ ಸಂಖ್ಯೆಗಳು ಗಾಜಾ ಜನರ ನೋವು ಮತ್ತು ಅಸಹಾಯಕತೆಯನ್ನು ಪ್ರತಿಬಿಂಬಿಸುತ್ತವೆ. ಇಂತಹ ಭೀಕರ ಸನ್ನಿವೇಶದಲ್ಲಿ, ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ಶೀಘ್ರ ಕದನ ವಿರಾಮದ ಬಗ್ಗೆ ಆಶಯ ವ್ಯಕ್ತಪಡಿಸಿದ್ದಾರೆ.

ಕದನ ವಿರಾಮ ಮಾತುಕತೆಗಳನ್ನು ಕತಾರ್ ಮತ್ತು ಅಮೆರಿಕದಂತಹ ಪ್ರಮುಖ ಮಧ್ಯಸ್ಥಗಾರರು ಮುನ್ನಡೆಸುತ್ತಿದ್ದಾರೆ. ಆದರೆ, ಈ ಮಾತುಕತೆಗಳು ಹಲವಾರು ಪ್ರಮುಖ ಅಡೆತಡೆಗಳಿಂದಾಗಿ ಹಿನ್ನಡೆ ಅನುಭವಿಸುತ್ತಿವೆ ಎಂದು ಹಮಾಸ್ ಹೇಳಿದೆ.

## ಗ್ಯಾರಂಟಿ ಯೋಜನೆ ಶೇ. 98ರಷ್ಟು ಯಶಸ್ವಿ

▶▶ಮೊದಲನೇ ಪುಟದಿಂದ

ಸಮಿತಿಯ ಸದಸ್ಯರನ್ನು ತಕ್ಷಣವೇ ಸಂಪರ್ಕಿಸಬೇಕು. ಸಮಿತಿಯ ಸದಸ್ಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಉಳಿದ ಫಲಾನುಭವಿಗಳಿಗೆ ಯೋಜನೆಯನ್ನು ತಲುಪಿಸಲು ಮನೆಮನೆ ಸಮೀಕ್ಷೆಯನ್ನು ಮಾಡಿ ಶೇ. 100ರಷ್ಟು ಯಶಸ್ವಿ ಮಾಡಲು ಶ್ರಮಿಸಬೇಕೆಂದರು.

ಜಿಲ್ಲಾ ಗ್ಯಾರಂಟಿ ಸಮಿತಿ ಸದಸ್ಯ ಶಿವನಗೌಡ ಪಾಟೀಲ, ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಸಭೆಯನ್ನುದ್ದೇಶಿಸಿ ಮಾತನಾಡಿದರು. ಸಭೆಯಲ್ಲಿ ಪ.ಪಂ ಸದಸ್ಯರು, ನಾಮನಿರ್ದೇಶಿತ ಸದಸ್ಯರು, ಗ್ಯಾರಂಟಿ ಸಮಿತಿ ಸದಸ್ಯರು, ಅಂಗನವಾಡಿ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು. ಸ್ಥಾಯಿ ಸಮಿತಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ ಉಪಸ್ಥಿತರಿದ್ದರು. ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಸ್ವಾಗತಿಸಿದರು.

### ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಮಾಲಿಕೆ-9

# ಉತ್ತಮ ಶಿಕ್ಷಕರು ವಿದ್ಯಾರ್ಥಿಗಳ ಬದುಕಿನ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರ ಬದುಕು ಆದರ್ಶಮಯವಾಗಿದ್ದು, ಉತ್ತಮ ಶಿಕ್ಷಕರು ವಿದ್ಯಾರ್ಥಿಗಳ ಬದುಕಿನ ದಾರಿದೀಪವಾಗಿ ತಾವು ಎಂದೆಂದಿಗೂ ಗೌರವ ಪಡೆಯುವವರು. ಬಿ.ಜಿ. ಅಣ್ಣಿಗೇರಿ ಗುರುಗಳ ಶಿಷ್ಯ ಬಳಗವು ಉತ್ತಮ ಕಾರ್ಯಕ್ಕೆ ಅಡಿ ಇಟ್ಟಿದ್ದು, ಇದು ನಿರಂತರವಾಗಿ ಜನಮಾನಸದಲ್ಲಿ ಉಳಿಯುತ್ತದೆ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವ್ಹಿ. ಶೆಟ್ಟೆಪ್ಪನವರ ಹೇಳಿದರು.

ಅವರು ಬುಧವಾರ ಗದುಗಿನ ರಾಜೀವ ಗಾಂಧಿ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಎಸ್.ಎಸ್.ಎಲ್.ಸಿಯಲ್ಲಿ ಮೊದಲ 5 ಸ್ಥಾನಗಳನ್ನು ಪಡೆದುಕೊಂಡ ಗದಗ ತಾಲೂಕಿನ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದರು.

ಉತ್ತಮ ಶಿಕ್ಷಕರು ವಿದ್ಯಾರ್ಥಿಗಳೊಂದಿಗೆ ಆತ್ಮೀಯತೆ ಹೊಂದಿ ವಿವಿಧ ಬೋಧನಾ ಕೌಶಲ್ಯಗಳನ್ನು ಅಳವಡಿಸಿಕೊಂಡು ಮಕ್ಕಳ ಕಲಿಕೆಯನ್ನು ಅಭಿವೃದ್ಧಿಗೊಳಿಸುತ್ತಾರೆ. ಇಂದು ಪುರಸ್ಕಾರ ಪಡೆದ ಮಕ್ಕಳು ಪ್ರತಿಭಾನ್ವಿತರಾಗಲು ನಮ್ಮ ಶಿಕ್ಷಕ ಬಳಗ ಹಾಗೂ ಕುಟುಂಬವೂ ಸಹ ಕಾರಣವಾಗಿದೆ ಎಂದರಲ್ಲದೆ, ಮಕ್ಕಳ ಪ್ರತಿಭೆಗೆ ಪುರಸ್ಕಾರ ನೀಡಿ ಪ್ರೋತ್ಸಾಹಿಸುತ್ತಿರುವ ಪ್ರತಿಷ್ಠಾನವನ್ನು ಅಭಿನಂದಿಸಿದರು.



ಇನ್ನೋರ್ವ ಮುಖ್ಯ ಅತಿಥಿ, ಡಾ.ರಾಜಶೇಖರ ಪವಾಡಶೆಟ್ಟರ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಸಿಕ್ಕ ಅವಕಾಶಗಳನ್ನು, ಕೌಶಲ್ಯಗಳನ್ನು ಸದುಪಯೋಗ ಮಾಡಿಕೊಳ್ಳಬೇಕು. ಸಂಸ್ಕೃತಿ ಸಂಸ್ಕಾರಗಳನ್ನು ಅಳವಡಿಸಿಕೊಂಡು ಪ್ರಾಮಾಣಿಕತೆಯಿಂದ ಪ್ರಯತ್ನಶೀಲರಾಗಿ ಅಭ್ಯಾಸ ಮಾಡಬೇಕು. ದುಶ್ಚಟಗಳನ್ನು ದೂರವಿಟ್ಟು ನಿರಂತರ ಅಭ್ಯಾಸ ಮಾಡಿ ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದರು.

ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಸರಸ್ವತಿ ವಿಭೂತಿ, ಅಣ್ಣಕ್ಕ ವಿಭೂತಿ, ಮಂಜುಳಾ ಹಡಪದ, ದರ್ಶನ ತಳಗಡೆ, ಯಶೋಧಾ ಢಕ್ಕಣ್ಣವರ ಅವರಿಗೆ ನಗದು ಪುರಸ್ಕಾರದ ಚೆಕ್, ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಅಧ್ಯಕ್ಷತೆಯನ್ನು ಎಸ್.ಬಿ. ಬಾಗೇವಾಡಿ ವಹಿಸಿದ್ದರು. ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಬಿ.ಜಿ. ಅಣ್ಣಿಗೇರಿ ಅವರ ಬದುಕು, ಸೇವೆಯನ್ನು ಬಣ್ಣಿಸಿ ಪ್ರತಿಷ್ಠಾನದ ಕಾರ್ಯವೈಖರಿಯನ್ನು ವಿವರಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ಸುಭಾಶ್ಚಂದ್ರ ಬೆಟ್ಟದೂರ, ಸಂಯೋಜಕರಾದ ಭಾರತಿ ಶಿವಕುಮಾರ ಪಾಟೀಲ, ನೇಹಾ, ಸುಧಾರಾಣಿ, ಪ್ರಸನ್ ಮುಂತಾದವರಿದ್ದರು. ಎಲ್.ಬಿ. ಕಾಲವಾಡ ಸ್ವಾಗತಿಸಿದರು. ವೈ.ಎಸ್. ಬಮ್ಮನಾಳ ನಿರೂಪಿಸಿದರು. ಕೊನೆಗೆ ವಿಜಯಲಕ್ಷ್ಮೀ ಚೂರಿ ವಂದಿಸಿದರು.

### ಗಾಂಧಿ ನಗರದಲ್ಲಿ

ಬೆಟಗೇರಿಯ ಗಾಂಧಿ ನಗರದ ಸರ್ಕಾರಿ ಪ್ರೌಢಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಪ್ರಿಯಾಂಕ ಜೋಗಿ, ವರುಣಕುಮಾರ ಹೊಟ್ಟಿ, ಪರಶುರಾಮ ಸಕ್ರಗೌಡ ಅವರಿಗೆ ನಗದು ಪುರಸ್ಕಾರದ ಚೆಕ್, ಪ್ರಮಾಣಪತ್ರ ನೀಡಿ ಗೌರವಿಸಲಾಯಿತು. ಅಧ್ಯಕ್ಷತೆಯನ್ನು ಎಂ.ಶಾರದಾ ವಹಿಸಿದ್ದರು. ವೇದಿಕೆಯಲ್ಲಿ ಪ್ರತಿಷ್ಠಾನದ ಪದಾಧಿಕಾರಿಗಳಿದ್ದರು. ಜ್ಯೋತಿ ಅಂಗಡಿ ನಿರೂಪಿಸಿದರು. ಶಾಲಿನಿ ಮೇರವಾಡೆ ವಂದಿಸಿದರು.

### ಎಸ್‌ಎಂಕೆ ನಗರದಲ್ಲಿ

ಗದುಗಿನ ಎಸ್.ಎಂ. ಕೃಷ್ಣಾ ನಗರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ವರ್ಷಾ ಗುಂಜಾಳ, ನಾಜೀಯಾ ಅಂಗಡಿ, ಜಗದೀಶ ಭಜಂತ್ರಿ, ವಿಜಯಲಕ್ಷ್ಮೀ ಸುಣಗಾರ, ಕಾರ್ತಿಕ ಮುನವಳ್ಳಿ ಅವರಿಗೆ ನಗದು ಪುರಸ್ಕಾರದ ಚೆಕ್, ಪ್ರಮಾಣಪತ್ರ ನೀಡಿ ಗೌರವಿಸಲಾಯಿತು. ಅಧ್ಯಕ್ಷತೆಯನ್ನು ಎಸ್.ಸಿ. ನಾಗರಳ್ಳಿ ವಹಿಸಿದ್ದರು, ಮುಖ್ಯ ಅತಿಥಿಗಳಾಗಿ ಡಾ. ಆರ್.ಟಿ. ಪವಾಡಶೆಟ್ಟರ ಆಗಮಿಸಿದ್ದರು. ವೇದಿಕೆಯಲ್ಲಿ ಪ್ರತಿಷ್ಠಾನದ ಪದಾಧಿಕಾರಿಗಳಿದ್ದರು. ಎಸ್.ಎಸ್. ಗೌಡರ ಸ್ವಾಗತಿಸಿ ವಂದಿಸಿದರು.

## 4 ವರ್ಷದಲ್ಲಿ 16 ಸೇತುವೆಗಳು ಕುಸಿತ: ಶಾಸಕ ಜಿಗ್ನೇಶ್ ಮೇವಾನಿ

■ವಿಜಯಸಾಕ್ಷಿ ಸುದ್ದಿ, ಗಾಂಧಿನಗರ

ಗುಜರಾತ್‌ನಲ್ಲಿ ಭ್ರಷ್ಟಾಚಾರ ಮತ್ತು ನಿರ್ಲಕ್ಷ್ಯದ ಇನ್ನೊಂದು ಮುಖವಾಡ ಬಯಲಾಗಿದೆ. ವಡೋದರಾ ಜಿಲ್ಲೆಯ ಗಂಭೀರಾ ಸೇತುವೆ ಕುಸಿತದಿಂದ 13 ಅಮಾಯಕ ಜನರು ಜೀವ ಕಳೆದುಕೊಂಡಿರುವುದು ದೇಶದ ಆಡಳಿತ ವ್ಯವಸ್ಥೆಯ ಮೇಲೆ ಗಂಭೀರ ಪ್ರಶ್ನೆಗಳನ್ನು ಮೂಡಿಸಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ದೇಶದಲ್ಲಿ ಇಂತಹ ದುರಂತಗಳು ಸಂಭವಿಸುತ್ತಿರುವಾಗಲೂ ಐದು ರಾಷ್ಟ್ರಗಳ ಪ್ರವಾಸದಲ್ಲಿ "ಸಾಂಪ್ರದಾಯಿಕ ಡ್ರಮ್" ಬಾರಿಸುತ್ತಿರುವುದು ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

"ನರೇಂದ್ರ ಮೋದಿ ವಿದೇಶದಲ್ಲಿ ಮಜಾ ಮಾಡುತ್ತಿದ್ದರೆ, ಇಲ್ಲಿ ಗುಜರಾತ್‌ನಲ್ಲಿ ಅಮಾಯಕ ನಾಗರಿಕರು ಸಾಯುತ್ತಿದ್ದಾರೆ" ಎಂದು ಗುಜರಾತ್‌ನ ಕಾಂಗ್ರೆಸ್ ಶಾಸಕ ಜಿಗ್ನೇಶ್ ಮೇವಾನಿಯವರು ನೋವಿನಿಂದ ನುಡಿದರು.



ಲಕ್ಷ್ಮೇಶ್ವರ ಸಮೀಪದ ಹೂವಿನಶಿಗ್ಲಿ ಮಠದಲ್ಲಿ ಗುರುಕುಲದ ವಿದ್ಯಾರ್ಥಿಗಳು ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ಪಾದಪೂಜೆ ಮಾಡುವ ಮೂಲಕ ಗುರು ಪೂರ್ಣಿಮೆ ಆಚರಿಸಿದರು. ಈ ವೇಳೆ ಶ್ರೀಗಳು ಶಿಷ್ಯಂದಿರಿಗೆ ಶುಭಾಶೀರ್ವಾದ ಸಂದೇಶಗೈದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ವಿಕಲಚೇತನರ ರಾಷ್ಟ್ರೀಯ ವಿದ್ಯಾರ್ಥಿ ವೇತನ ಯೋಜನೆಯಡಿ ನ್ಯಾಷನಲ್ ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ ವಿದ್ಯಾರ್ಥಿ ವೇತನದ ಅರ್ಜಿ ಆಹ್ವಾನಿಸಲಾಗಿದೆ.

2025-26ನೇ ಸಾಲಿನ ರಾಷ್ಟ್ರೀಯ ವಿದ್ಯಾರ್ಥಿ ವೇತನದ ಯೋಜನೆಯಡಿ ಗದಗ ಜಿಲ್ಲೆಯಲ್ಲಿ pre metric, post metric & top class education ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ಪ್ರಿ ಮೆಟ್ರಿಕ್ ಅರ್ಜಿ ಸಲ್ಲಿಸಲು ದಿನಾಂಕ:30/09/2025 ರವರೆಗೆ ; ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ:30/11/2025 ರವರೆಗೆ ; ಟಾಪ್ ಕ್ಲಾಸ್ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ:30/11/2025 ರವರೆಗೆ ಆನ್‌ಲೈನ್ ಮೂಲಕ https://scholarships.gov.in ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ತಿಳಿಸಲಾಗಿದೆ.

ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಒಂದು ಪ್ರತಿಯನ್ನು ತಮ್ಮ ವ್ಯಾಪ್ತಿಗೊಳಪಡುವ ಗ್ರಾ.ಪಂ ವಿಆರ್ ಡಬ್ಲ್ಯೂ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿ ಯುಆರ್‌ಡಬ್ಲ್ಯೂ, ತಾ.ಪಂ. ಎಂಆರ್‌ಡಬ್ಲ್ಯೂ ಇವರಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರತಿಭಾ ಮಾದರ, ಜಿಲ್ಲಾ ಸಂಯೋಜಕರು, ಗದಗ ಜಿಲ್ಲೆ 9606151149 ಖಾಜಾ ಹುಸೇನ. ಕಾತರಕಿ, ಎಂ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ಗದಗ 8867556465 , ಬಸವರಾಜ. ಓಲಿ, ಎಂ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ರೋಣ 9741615926 , ಎಂ ಆರ್ ಡಬ್ಲ್ಯೂ ಶಶಿಕಲಾ. ವಡ್ಡಟ್ಟಿ, ತಾಲೂಕು ಪಂಚಾಯತ್, ಮುಂಡರಗಿ 9611922445, ಭಾರತಿ. ಮುರಶಿಳ್ಳಿ, ಎಂ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ಶಿರಹಟ್ಟಿ 8951128679, ಶಿವಾನಂದ ಹಾದಿಮನಿ, ಎಂ ಆರ್ ಡಬ್ಲ್ಯೂ ತಾಲೂಕು ಪಂಚಾಯತ್, ನರಗುಂದ 9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ರೂಮ್ ನಂ:29 ರಲ್ಲಿನ ದೂರವಾಣಿ ಸಂಖ್ಯೆ 08372-220419ರ ಮೂಲಕ ಸಂಪರ್ಕಿಸಬಹುದಾಗಿದೆ.

## ಗುರುವು ವಿದ್ಯಾರ್ಥಿಗಳ ಬಾಳಿನ ಬೆಳಕು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಲ್ಲಿ ವಿದ್ಯಾರ್ಥಿಗಳು ಗುರುಪೂರ್ಣಿಮೆಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಿದರು.

ಸಂಸ್ಥಾಪಕರಾದ ಟಿ.ಈಶ್ವರ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ದಿನನಿತ್ಯದ ಚಟುವಟಿಕೆಗಳನ್ನು ಸೃಜನಾತ್ಮಕವಾಗಿ ರೂಪಿಸಿಕೊಂಡು ಸಾರ್ಥಕ ವಿದ್ಯಾರ್ಥಿಯ ಜೀವನ ನಡೆಸುತ್ತಾ, ಸಮಾಜದಲ್ಲಿ ಗುರುವಿನ ಮಹತ್ವ ತಿಳಿಸಿ, ಗುರುವಿನಿಂದ ಗುರಿಗಳನ್ನು ಹೇಗೆ ಸಾಧಿಸಬೇಕು ಎಂಬುದನ್ನು ತಿಳಿಸಿದರು.

ನಿರ್ದೇಶಕ ಎಚ್.ಸಿ. ರಟಗೇರಿ ಮಾತನಾಡಿ, ಗುರುವು ವಿದ್ಯಾರ್ಥಿಗಳ ಬಾಳಿನ ಬೆಳಕು. ಒಬ್ಬ ಗುರು ಯಾವಾಗಲೂ ವಿದ್ಯಾರ್ಥಿಗಳಿಗೆ ಸಮಗ್ರತೆ, ಉತ್ತಮ ಬದ್ಧತೆ-ಯ ಮಾರ್ಗವನ್ನು ಮತ್ತು ಆದರ್ಶಮಯ ಮೌಲ್ಯಗಳನ್ನು ಅನುಸರಿಸುವಂತೆ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲರು, ಶಿಕ್ಷಕರು, ವಿದ್ಯಾರ್ಥಿಗಳು ಹಾಜರಿದ್ದರು.

## ಕಾರ್ಮಿಕ ವಿರೋಧಿ ನೀತಿಗೆ ಖಂಡನೆ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ 14 ಗ್ರಾಮ ಪಂಚಾಯಿತಿಗಳ ಸಿಬ್ಬಂದಿಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ರೈತ ವಿರೋಧಿ, ಕಾರ್ಮಿಕ ವಿರೋಧಿ ನೀತಿಗಳನ್ನು ಖಂಡಿಸಿ ಬುಧವಾರ ತಾಲೂಕು ಪಂಚಾಯಿತಿ ಎದುರು ಪ್ರತಿಭಟನೆ ನಡೆಸಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಅವರಿಗೆ ಮನವಿ ಸಲ್ಲಿಸಿದರು.

ಪ್ರಮುಖ ಬೇಡಿಗಳಾದ ಪಿಂಚಣಿ ಸೌಲಭ್ಯ, ಆರೋಗ್ಯ ವಿಮೆ, ಎಸ್‌ಡಿಎ ಹುದ್ದೆ ಸೃಷ್ಟಿ ಸೇರಿದಂತೆ ಮತ್ತಿತರ ಬೇಡಿಕೆಗಳನ್ನು ಈಡೇರಿಸುವಂತೆ ಹಾಗೂ ಕೇಂದ್ರ ಸರ್ಕಾರದ ನಾಲ್ಕು ಕಾರ್ಮಿಕ ಕೋಡ್‌ಗಳನ್ನು ರದ್ದುಗೊಳಿಸಿ ಕಾರ್ಮಿಕರ ಹಿತಾಸಕ್ತಿ ಕಾಪಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಬಸವರಾಜ ಅರ್ಕಸಾಲಿ, ಮಾಂತೇಶ ಸುಣಗಾರ, ಮಹೇಶ ಮೂಲಿಮನಿ, ನಿಂಗರಾಜ ಬಾಗವಾಡ, ಶಂಕ್ರಪ್ಪ ಗೋಣೆಪ್ಪನವರ, ಸಿದ್ದು ಹರದಗಟ್ಟಿ, ಹನಮಂತಗೌಡ ಮರಲಿಂಗನಗೌಡ್ರ, ಶಂಕ್ರಪ್ಪ ಶಿರಹಟ್ಟಿ, ಕಿರಣಗೌಡ ಪಾಟೀಲ, ನಾಗರಾಜ ಜಾಡರ, ಹಾಲೇಶ ಪಾಟೀಲ, ಸಿದ್ದರಾಮಗೌಡ ಪಾಟೀಲ ಮತ್ತಿತರರು ಇದ್ದರು.

## ರಾಷ್ಟ್ರೀಯ ಖಾದ್ಯತೈಲ ಅಭಿಯಾನ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

2025-26ನೇ ಸಾಲಿನ ರಾಷ್ಟ್ರೀಯ ಖಾದ್ಯತೈಲ ಅಭಿಯಾನ ಯೋಜನೆಯಡಿ ಸೂರ್ಯಕಾಂತಿ (ಕೆ.ಬಿ.ಎಸ್.ಎಚ್-78) ತಳಿಯ ಕಿರುಚೀಲ ವಿತರಣೆ ಹಾಗೂ ಕೃಷಿ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಬುಧವಾರ ಜರುಗಿತು.

ಗದಗ ಕೃಷಿ ಇಲಾಖೆಯ ವತಿಯಿಂದ ಇಲ್ಲಿಯ ವಿರೂಪಾಕ್ಷೇಶ್ವರ ಪ್ರಾಂಗಣದಲ್ಲಿ ರೈತರಿಗೆ ಉಚಿತವಾಗಿ ಸೂರ್ಯಕಾಂತಿ ಬೀಜವನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಕೃಷಿ ಅಧಿಕಾರಿ ಬಸವರಾಜೇಶ್ವರಿ ಸಜ್ಜನರ, ಎಣ್ಣೆಕಾಳು ಬೆಳೆಗಳ ವಿಸ್ತೀರ್ಣವನ್ನು ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಅಟಲ್ ಭೂಜಲ ಯೋಜನೆಯಡಿ ಸೂಕ್ಷ್ಮ ನೀರಾವರಿ ಘಟಕಗಳು ಲಭ್ಯವಿದ್ದು, ನೀರಾವರಿ ಹಾಗೂ ಕೃಷಿ ಹೊಂಡ ಹೊಂದಿದ ಹಾಗೂ ಹಳ್ಳದ ಪಕ್ಕದಲ್ಲಿ ಜಮೀನು ಹೊಂದಿರುವ ರೈತರು, ಬೆಟಗೇರಿ ರೈತಸಂಪರ್ಕ ಕೇಂದ್ರಕ್ಕೆ ಅರ್ಜಿ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆಯಬೇಕೆಂದರು.

ಗದಗ ತಾಲೂಕು ಕೃಷಿಕ ಸಮಾಜದ ಉಪಾಧ್ಯಕ್ಷ ಡಾ. ಎಂ.ಎಸ್. ಮಲ್ಲಾಪೂರ ಮಾತನಾಡಿ, ಕೃಷಿ ಇಲಾಖೆಯೊಂದಿಗೆ ಉತ್ತಮ ಬಾಂಧವ್ಯ ಹೊಂದಿ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಳ್ಳಲು ಸಲಹೆ ನೀಡಿದರು.

ಜಿಲ್ಲಾ ಕೃಷಿಕ ಸಮಾಜದ ಉಪಾಧ್ಯಕ್ಷ ರಾಮಣ್ಣ ಹೂವಣ್ಣವರ ಅಧ್ಯಕ್ಷತೆ ವಹಿಸಿದ್ದರು. ಭಾರತೀಯ ಕಿಸಾನ್ ಸಂಘದ ತಾಲೂಕು ಅಧ್ಯಕ್ಷ ವೆಂಕಟೇಶ ದೊಂಗಡೆ, ರೈತರಾದ ಚನ್ನಪ್ಪ ಹುಬ್ಬಳ್ಳಿ, ಶಂಕ್ರಪ್ಪ ಕುಂಬಾರ, ಮಂಜುನಾಥ ಸಜ್ಜನರ, ಅಂದಪ್ಪ ಮೆಣಸಿನಕಾಯಿ, ಪಂಚಪ್ಪ ಬಳಿಗೇರ, ಶಿವು ಟೆಂಗಿನಕಾಯಿ, ಬುದ್ದಿವಂತಪ್ಪ ಹಡಗಲಿ ಮುಂತಾದವರು ಉಪಸ್ಥಿತರಿದ್ದರು.

### ನವನಗರ ಸ್ಲಂ ಪ್ರದೇಶದಲ್ಲಿ ಸ್ಥಳೀಯ ನಿವಾಸಿಗಳ ಸಭೆಯಲ್ಲಿ ಇಮ್ತಿಯಾಜ ಮಾನ್ವಿ ಕರೆ

# ಸಂಘಟನೆ ಬಲಿಷ್ಠಗೊಳಿಸುವುದು ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದ ಸ್ಲಂ ಜನರ ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ನಿರಂತರವಾಗಿ ಹೋರಾಟಗಳನ್ನು ನಡೆಸುತ್ತ ಬಂದಿದ್ದೇವೆ. ಈ ನಿಟ್ಟಿನಲ್ಲಿ ನಮ್ಮ ಸ್ಲಂ ಪ್ರದೇಶದ ನಿವಾಸಿಗಳ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ನಮ್ಮ ಸಂಘಟನೆಯನ್ನು ಬಲಿಷ್ಠಗೊಳಿಸುವುದು ಅಗತ್ಯವಾಗಿದೆ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಹೇಳಿದರು.

ಅವರು ನಗರದ ಗಂಗಿಮಡಿ ರಸ್ತೆಯ ನವನಗರ ಸ್ಲಂ ಪ್ರದೇಶದಲ್ಲಿ ಸ್ಥಳೀಯ ನಿವಾಸಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ನವನಗರ ಪ್ರದೇಶದಲ್ಲಿ ವಾಸವಾಗಿರುವ ಕುಟುಂಬಗಳಿಗೆ ಈಗಾಗಲೇ ಸ್ಲಂ ಬೋರ್ಡ್‌ನಿಂದ ವಸತಿ ಯೋಜನೆ ಕಲ್ಪಿಸಲಾಗಿದೆ. ಈ ಪ್ರದೇಶದಲ್ಲಿ ನಾಗರಿಕ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಸಂಘಟನೆಯ ಮೂಲಕ ನಿರಂತರ ಹೋರಾಟಗಳನ್ನು ನಡೆಸಲಾಗುತ್ತಿದೆ. ಇತ್ತೀಚೆಗೆ ನವನಗರ ಪ್ರದೇಶದ ಕುಟುಂಬಗಳನ್ನು ಎತ್ತಂಗಡಿ ಮಾಡಲು ಭೂ ಮಾಫಿಯಾಗಳು ಕುತಂತ್ರ ನಡೆಸುತ್ತಿರುವುದನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಸ್ಥಳೀಯ ಜನರಿಗೆ ರಕ್ಷಣೆ ನೀಡಬೇಕೆಂದು ಮನವಿ ಮಾಡಲಾಗಿದೆ ಎಂದರು.



ನವನಗರ ಶಾಖೆ ಸಮಿತಿ ಅಧ್ಯಕ್ಷ ಮೆಹಬೂಬಸಾಬ ಬಳ್ಳಾರಿ ಮಾತನಾಡಿ, ನಮ್ಮ ಭಾಗದ ಜನರ ಬೇಡಿಕೆಗಳಿಗೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ನಾವು ಕಾರ್ಮಿಕರು ಕಷ್ಟಪಟ್ಟು ದುಡಿದು ಹಣವನ್ನು ಕ್ರೋಢೀಕರಿಸಿ ಈ ಹಿಂದೆ ಖರೀದಿ ಮಾಡಿರುವ ನಮ್ಮ ನಿವೇಶನಗಳನ್ನು ಕಬಳಿಸಿಕೊಳ್ಳಲು ಭೂ ಮಾಫಿಯಾಗಳು ಕುತಂತ್ರ ನಡೆಸುತ್ತಿವೆ. ಇದನ್ನು ವಿರೋಧಿಸಿ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ನಿರಂತರವಾಗಿ ಹೋರಾಟಗಳನ್ನು ನಡೆಸುತ್ತಿದ್ದೇವೆ ಎಂದರು.

ನವನಗರ ಸಮಿತಿ ಉಪಾಧ್ಯಕ್ಷ ಸಲೀಂ ಹರಿಹರ, ಕಾರ್ಯದರ್ಶಿ ಖಾಜಾಸಾಬ ಇಸ್ಮಾಯಿಲನವರ, ಶೇಖಪ್ಪ ಶೆಗಣಿ, ಅಶೋಕ ಗುಮಾಸ್ತೆ, ಮೊಹ್ಮದಗೌಸ ಅಕ್ಕಿ, ಇಬ್ರಾಹಿಂ ಮುಲ್ಲಾ, ಮಕ್ತುಮಸಾಬ ಮುಲ್ಲಾನವರ, ಖಾಜಾಸಾಬ ಗಬ್ಬೂರ. ಬಸವರಾಜ ಕಳಸದ, ದಾವಲಸಾಬ ಮೋಮಿನ, ಜಂದಿಸಾಬ ಢಾಲಾಯತ, ಮಹ್ಮದರಫೀಕ ಬರದೂರ, ಮೆಹಬೂಬ ಹುಯಿಲಗೋಳ, ರುದ್ರಪ್ಪ ಕಳಬಂಡಿ, ಮಂಜುನಾಥ ಮುಗಳಿ, ವೆಂಕಟೇಶ ಬಿಂಕದಕಟ್ಟಿ, ನಾರಾಯಣ ಗೌಳಿ, ಹಜರತಅಲಿ ಹಾವೇರಿ, ದಾದಾಪೀರ ಅಣ್ಣೀಗೇರಿ, ಖಾಜಾಸಾಬ ಉಮಚಗಿ, ರಿಜ್ವಾನ ಮುಲ್ಲಾ, ಯಾಸೀನ ನದಾಫ್, ನಾರಾಯಣ ಗಾಯಕವಾಡ ಸೇರಿದಂತೆ ನವನಗರ ಸ್ಲಂ ಪ್ರದೇಶದ ನೂರಾರು ನಿವಾಸಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಆರ್‌ಎಸ್‌ಎಸ್ ಬಗ್ಗೆ ಚರ್ಚಿಸಲು ಖರ್ಗೆ ಅವರಿಗೆ ಹಕ್ಕಿಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸಾಂಸ್ಕೃತಿಕ ಪರಂಪರೆಯ ಏಕೀಕರಣದ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ಸಮರ್ಪಿತವಾದ ಮತ್ತು ಸ್ವಯಂ ಶಿಸ್ತಿನ ಭಾವನೆಯೊಂದಿಗೆ ದೇಶ ಮೊದಲು ಎಂಬ ಧ್ಯೇಯ, ಸಾಮಾಜಿಕ ಸೇವೆಗೆ ಬದ್ಧವಾಗಿರುವ ಸಂಘಟನೆಯಾದ ಆರ್‌ಎಸ್‌ಎಸ್ ಬಗ್ಗೆ ಚರ್ಚಿಸಲು ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಅರ್ಹತೆ ಇಲ್ಲ ಎಂದು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ನೀಡಿರುವ ಪತ್ರಿಕಾ ಪ್ರಕಟಣೆಯಲ್ಲಿ, ದೇಶಾದ್ಯಂತ ಲಕ್ಷಾಂತರ ಸ್ವಯಂಸೇವಕರನ್ನು ಹೊಂದಿರುವ, ಹಲವಾರು ತ್ಯಾಗಗಳ ಮೂಲಕ ದೇಶದ ಅಭಿವೃದ್ಧಿಗೆ ನಿಸ್ವಾರ್ಥ ಸೇವೆ ಸಲ್ಲಿಸಲು ಮತ್ತು ಕೊಡುಗೆ ನೀಡಲು ಯಾವಾಗಲೂ ಸಿದ್ಧರಾಗಿರುವ ಆರ್‌ಎಸ್‌ಎಸ್ ಬಗ್ಗೆ ಚರ್ಚಿಸುವಾಗ ತಮ್ಮ ಮಾತುಗಳ ಬಗ್ಗೆ ಜಾಗರೂಕರಾಗಿರಬೇಕು ಎಂದಿದ್ದಾರಲ್ಲದೆ, 'ಶಾಖೆಗಳ' ದೈನಂದಿನ ಕಾರ್ಯಾಚರಣೆಗಳಿಂದ ಪೋಷಿಸುವ ದೈಹಿಕ ತರಬೇತಿ, ಸಾಂಸ್ಕೃತಿಕ ಉಪಕ್ರಮಗಳು ಮತ್ತು ದೇಶಭಕ್ತಿಯ ಭಾವನೆಗಳನ್ನು ನೇರವಾಗಿ ವೀಕ್ಷಿಸಲು ಸಚಿವ ಖರ್ಗೆ ಅವರಿಗೆ ಸಲಹೆ ನೀಡಿದ್ದಾರೆ.

ನಿಮ್ಮ ರಾಜಕೀಯ ವಿಧಾನವು ನಿಮ್ಮಂತೆ ಆನುವಂಶಿಕ ಅಧಿಕಾರಕ್ಕೆ ಅಂಟಿಕೊಂಡಿರುವ, ಸಾರ್ವಜನಿಕ ಹಣವನ್ನು ದುರುಪಯೋಗಪಡಿಸಿಕೊಳ್ಳುವ ಮತ್ತು ಯಾವುದೇ ಅಭಿವೃದ್ಧಿಯನ್ನು ಪ್ರೋತ್ಸಾಹಿಸದ ಕಲಬುರ್ಗಿಯಂತೆಯೇ ಅಲ್ಲ ಎಂದು ಅವರು ಹೇಳಿದ್ದಾರೆ.

### ರಂಭಾಪುರಿ ಪೀಠದ ಗುರುಪೂರ್ಣಿಮಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಗುರುವೆಂದರೆ ವ್ಯಕ್ತಿಯಲ್ಲ, ಮಹಾನ್ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಅಗ್ರ ಸ್ಥಾನವಿದೆ. ಗುರುವನ್ನು ಬ್ರಹ್ಮ, ವಿಷ್ಣು, ಮಹೇಶ್ವರ ಸ್ವರೂಪರೆಂದು ಭಾವಿಸುತ್ತಾರೆ. ಬದುಕನ್ನು ಅರಳಿಸುವ ಪಸರಿಸುವ ಮತ್ತು ದುಷ್ಟತನ ಅಳಿಸುವ ಶಕ್ತಿ ಗುರುವಿಗಿದೆ. ಅಜ್ಞಾನ ಕಳೆದು ಸುಜ್ಞಾನದ ಅರಿವನ್ನು ತುಂಬುವವನೇ ನಿಜವಾದ ಗುರುವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಗುರುಪೂರ್ಣಿಮಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಗುರುವೆಂದರೆ ವ್ಯಕ್ತಿಯಲ್ಲ. ಅದೊಂದು ಮಹಾನ್ ಶಕ್ತಿ. ಜ್ಞಾನ ನೀಡಿ ಸನ್ಮಾರ್ಗದಲ್ಲಿ ನಡೆಸುವವನೇ ಗುರು ಎಂಬ ನಂಬಿಕೆಯಿದೆ. ಅಜ್ಞಾನ, ಅಹಂಕಾರ, ಅಂಧಕಾರ ಅಳಿಸಿ ಸುಜ್ಞಾನ ಜ್ಯೋತಿಯಾಗಿ ಬಾಳು ಬೆಳಗಿಸುವಾತನೇ ಗುರು ಎಂದು ಶಾಸ್ತ್ರ ಸಾರುತ್ತದೆ. ಆಷಾಢ ಮಾಸದಲ್ಲಿ ಬರುವ ಹುಣ್ಣಿಮೆಯನ್ನು ಗುರು ಪೂರ್ಣಿಮಾ ಎಂತಲೂ, ವ್ಯಾಸರು ಹುಣ್ಣಿಮೆಯಂದೇ ಜನ್ಮ ತಾಳಿರುವ ಕಾರಣ ವ್ಯಾಸ ಪೂರ್ಣಿಮಾ ಎಂತಲೂ ಕರೆಯುತ್ತಾರೆ. ಮುಂದೆ ಗುರಿ, ಹಿಂದೆ ಒಬ್ಬ ಗುರುವಿನ



ಕಾರುಣ್ಯ ಪ್ರತಿಯೊಬ್ಬರಿಗೂ ಬೇಕು ಎಂದರು.

ಗುರು ಪೂರ್ಣಿಮಾ ಅಂಗವಾಗಿ ಕ್ಷೇತ್ರದ ಎಲ್ಲ ದೈವಗಳಿಗೆ ವಿಶೇಷ ಪೂಜೆ ಜರುಗಿತು. ಈ ಪವಿತ್ರ ಸಮಾರಂಭದಲ್ಲಿ ಲಿಂಗದಹಳ್ಳಿ, ಮಳಲಿ, ಸಂಗೊಳ್ಳಿ, ಬಿಳಕಿ, ಬೇರುಗಂಡಿ, ನೆಗಳೂರು, ಕಾರ್ಜುವಳ್ಳಿ, ಮಳಖೇಡ, ದೊಡ್ಡಸಗರ, ಹುಡಗಿ, ಗುಂಡಪಲ್ಲಿ ಮಠಗಳ ಶಿವಾಚಾರ್ಯರು ಹಾಗೂ ಹುಬ್ಬಳ್ಳಿಯ ಆರ್.ಎಂ. ಹಿರೇಮಠ, ಸೋಲಾಪುರದ ರಾಜು, ನಾಂದೇಡದ ವಿನಾಯಕ, ಹೂವಿನಮಡಲು ಹಾಲಸ್ವಾಮಿ, ಶಿವಮೊಗ್ಗದ ಟಿ.ವಿ. ಶಿವಕುಮಾರ್, ಕೊಡಿಯಾಲ ಹೊಸಪೇಟೆ ಗಿರೀಶ್, ಚಿಕ್ಕಮಗಳೂರು ಪ್ರಭುಲಿಂಗಶಾಸ್ತ್ರಿ ಸೇರಿದಂತೆ ಲಿಂಗದಹಳ್ಳಿ ದೊಡ್ಡಸಗರ ಸದ್ಭಕ್ತರು ಪಾಲ್ಗೊಂಡು ಜಗದ್ಗುರುಗಳವರ ಪಾದ ಪೂಜಾ ನೆರವೇರಿಸಿ ಆಶೀರ್ವಾದ ಪಡೆದರು.

ಬಂದ ಎಲ್ಲ ಭಕ್ತರಿಗೂ ಅನ್ನ ದಾಸೋಹವನ್ನು ರಾಣೆಬೆನ್ನೂರು ತಾಲೂಕಿನ ಕೊಡಿಯಾಲ ಹೊಸಪೇಟೆ ಜುಂಜಪ್ಪ ಹೆಗ್ಗಪ್ಪನವರ ಮಕ್ಕಳು ನೆರವೇರಿಸಿದರು.

ಪಾಪ ಕಾರ್ಯಕ್ಕೆ ಮನಸ್ಸು ಹೋಗದಂತೆ, ಪುಣ್ಯ ಕಾರ್ಯದಲ್ಲಿ ಮನಸ್ಸು ಬೆಳೆಯುವಂತೆ ಉತ್ತಮ ಸ್ಫೂರ್ತಿ ನೀಡಿ ಮುಕ್ತಿ ಮಾರ್ಗ ತೋರುವ ಗುರುವನ್ನು ಪಡೆದು ಜೀವನ ಸಾರ್ಥಕಪಡಿಸಿಕೊಳ್ಳಬೇಕಾಗಿದೆ. ಆಷಾಢ ಮಾಸದಲ್ಲಿ ಬರುವ ಗುರು ಪೂರ್ಣಿಮಾ ದಿನದಂದು ಶಿವನು ಯೋಗ ವಿದ್ಯೆಯನ್ನು ಸಪ್ತ ಮಹರ್ಷಿಗಳಿಗೆ ಅರುಹಿ ಮೊದಲ ಗುರುವಾದನು ಎಂಬ ನಂಬಿಕೆಯಿದೆ. ಏಳಿ ಎದ್ದೇಳಿ, ಗುರಿ ಮುಟ್ಟುವವರೆಗೂ ನಿಲ್ಲಬೇಡಿ ಎಂಬ ವಿವೇಕಾನಂದರ ವಾಣಿಯಂತೆ ಜಾಗೃತರಾಗಿ ಶ್ರೇಷ್ಠ ಗುರುವನ್ನು ಪಡೆದು ಭವ ಬಂಧನದಿಂದ ಮುಕ್ತರಾಗಬೇಕೆಂದು ರಂಭಾಪುರಿ ಶ್ರೀಗಳು ನುಡಿದರು.

# ನರೇಗಾ ಸಿಬ್ಬಂದಿಗಳ ಚಳುವಳಿಗೆ ಬೆಂಬಲ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೇತನ ವಿಳಂಬ ಹಾಗೂ ಸೇವಾಭದ್ರತೆ ಕುರಿತಂತೆ ಲಕ್ಷ್ಮೇಶ್ವರ ತಾ.ಪಂ ಆವರಣದಲ್ಲಿ ಹಮ್ಮಿಕೊಂಡಿರುವ ಅಸಹಕಾರ ಚಳವಳಿಗೆ ನರೇಗಾ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಅಧ್ಯಕ್ಷ ಸುರೇಶ ಬಾಳಿಕಾಯಿ ಮಂಗಳವಾರ ಬೆಂಬಲ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಅವರು, ನರೇಗಾ ಸಿಬ್ಬಂದಿಗಳು ವೇತನವಿಲ್ಲದೇ ಜೀವನ ನಡೆಸುವುದು ಕಷ್ಟಕರವಾಗಿದೆ. ಸೇವಾ ಭದ್ರತೆ-ಯೂ ಇಲ್ಲದ್ದರಿಂದ ಭವಿಷ್ಯದ ಚಿಂತೆ ಕಾಡುತ್ತಿದೆ. ರಾಜ್ಯ ಹಾಗೂ ಆಯುಕ್ತರ ಇಲಾಖೆಯಿಂದ ಬಂದ ಮಾಹಿತಿ ಪ್ರಕಾರ ಇನ್ನೆರಡು ದಿನಗಳಲ್ಲಿ ವೇತನ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ವೇತನ ಆಗುವವರೆಗೂ ಅಸಹಕಾರ ಚಳುವಳಿಗೆ ನಮ್ಮ ಬೆಂಬಲ ಇರುತ್ತದೆ. ರಾಜ್ಯ ನರೇಗಾ ಸಂಘದ ನಿರ್ದೇಶನದಂತೆ ನಾವೆಲ್ಲರೂ ನಡೆಯಬೇಕಾಗುತ್ತದೆ ಎಂದು ಸಲಹೆ ನೀಡಿದರು.

ಇಲಾಖೆಯ ವೃಂದ ಸಂಘಗಳು, ಪಿಡಿಓ ಹಾಗೂ ಸೆಕ್ರೆಟರಿ ವೃಂದ ಸಂಘ, ಬಿಎಫ್ಟಿ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ, ಬಿಲ್ ಕಲೆಕ್ಟರ್ ಹಾಗೂ ಡಿಇಓ ಸಂಘದ ತಾಲೂಕಾ ಘಟಕಗಳು ಬೆಂಬಲ ನೀಡಿದವು.

ಈ ವೇಳೆ ಹರೀಶ ಸೊಬರದ, ಮೋಹನಕುಮಾರ ಹೊಂಬಾಳ, ಮಂಜುನಾದಸ್ವಾಮಿ ಹಂಜಿಗಿಮಠ, ಶ್ರೀಧರ್ ಕುಲಕರ್ಣಿ, ಫಕೀರೇಶ ನಿಟ್ಟಾಲಿ, ಮಂಜುನಾಥ ತಳವಾರ, ಶ್ರೀನಿವಾಸ್ ಕಲಾಲ್, ಭರಮಗೌಡ್ರು, ಹುಲಿಗಪ್ಪ ಭಜಂತ್ರಿ, ಖಾಸಿಮಸಾಬ್ ನದಾಫ್, ಸತೀಶ ಅರಿಶಿಣದ, ತಿರುಕಪ್ಪ ಬಾಲೆಹೊಸೂರ, ಶಿಲ್ಪಾ ಲಮಾಣಿ, ಮಹಾಂತೇಶಗೌಡ ಪಾಟೀಲ, ಭಾರತಿ ಯಂಗಾಡಿ, ಶಿವಕ್ಕ ಮಾದರ, ಗಂಗವ್ವ ಹರಿಜನ, ಮಂಜುಳಾ ಕಟ್ಟಿಮನಿ, ನಿರ್ಮಲ ಚಿಣಗಿ, ಗೌರಮ್ಮ ಲಮಾಣಿ, ಪರಮೇಶ್ ಲಮಾಣಿ, ವಿನೋದ್ ಕುಮಾರ್ ಲಮಾಣಿ, ಭೀಮಪ್ಪ ರಾಥೋಡ, ಸೋಮು ತಳವಾರ ಪಾಲ್ಗೊಂಡಿದ್ದರು.

### ಮಹಿಳಾ ಚಾಲಕರಿಗೆ ಕಸ ಸಾಗಾಣಿಕೆ ವಾಹನದ ಚಾವಿ ಹಸ್ತಾಂತರ

# ಸ್ವಚ್ಛ ಭಾರತ ಅಭಿಯಾನಕ್ಕೆ ಮಹಿಳೆಯರ ಸಾರಥ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಗ್ರಾಮದಲ್ಲಿನ ಕಸ ಸಾಗಣೆ ವಾಹನ ಚಾಲನೆಗೆ ಮಹಿಳೆಯರು ಸಾರಥ್ಯ ವಹಿಸಿರುವುದು ಹೆಮ್ಮೆಯ ಸಂಗತಿ ಎಂದು ತಾಲೂಕು ಪಂಚಾಯಿತಿ ನೋಡಲ್ ಅಧಿಕಾರಿ ಎಂ.ವಿ. ಚಳಗೇರಿ ಹೇಳಿದರು.

ಸಮೀಪದ ಅಡರಕಟ್ಟಿ ಗ್ರಾಮದಲ್ಲಿ ಗುರುವಾರ ಮಹಿಳಾ ಚಾಲಕರಿಗೆ ಕಸ ಸಾಗಾಣಿಕೆ ವಾಹನದ ಕೀಲಿ ನೀಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಲಕ್ಷ್ಮೇಶ್ವರ ತಾಲೂಕಿನಲ್ಲಿ 8 ಗ್ರಾಮದ ಕಸ ಸಾಗಾಣಿಕೆ ವಾಹನಗಳಿಗೆ ಮಹಿಳೆಯರೇ ಚಾಲಕರಾಗಿ ಕಾರ್ಯ ನಿರ್ವಹಿಸುವ ಮೂಲಕ ಮಹಿಳೆಯರ ಸ್ವಾವಲಂಬಿ ಬದುಕಿಗೆ ಪ್ರೇರಣೆಯಾಗಿದ್ದಾರೆ. ಗ್ರಾಮದ ಪ್ರತಿ ಮನೆಯಿಂದ ಒಣ ಕಸ/ ಹಸಿ ಕಸ ಪ್ರತ್ಯೇಕವಾಗಿ ಸಂಗ್ರಹ ಮಾಡಿ ಕಸ ವಿಲೇವಾರಿ ಘಟಕಕ್ಕೆ ಸಾಗಾಣಿಕೆ ಮಾಡುವ ಮೂಲಕ ಗ್ರಾಮದ ಸ್ವಚ್ಛತೆಗೆ ಶ್ರಮಿಸುತ್ತಿದ್ದಾರೆ. ಕಸ ವಿಲೇವಾರಿ ವಾಹನ ಚಾಲನೆ ಮಾಡುವ ಮಹಿಳೆಯರಿಗೆ ತರಬೇತಿ ಹಾಗೂ ಚಾಲನಾ ಪ್ರಮಾಣ ಪತ್ರ ನೀಡಿ ಅವರ ಸ್ವಾವಲಂಬಿ ಜೀವನಕ್ಕೆ ಅಣಿಯಾಗಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.

ಈ ವೇಳೆ ಗ್ರಾ.ಪಂ ಅಧ್ಯಕ್ಷೆ ಪ್ರೇಮಕ್ಕ ಲಮಾಣಿ, ಉಪಾಧ್ಯಕ್ಷೆ ಕಾಶವ್ವ ದೊಡ್ಡಮನಿ, ನಿಂಗಪ್ಪ ಪ್ಯಾಟಿ, ಗಣೇಶ ನಾಯ್ಕ, ಸೋಮಣ್ಣ ಹವಳದ, ಕಮಲವ್ವ ಲಮಾಣಿ, ಹರೀಶ್ ಲಮಾಣಿ, ಪಿಡಿಓ ಸವಿತಾ ಸೋಮಣ್ಣನವರ, ಕಾರ್ಯದರ್ಶಿ ಎಸ್.ಕೆ. ಡಂಬಳ, ಕಸ ವಿಲೇವಾರಿ ವಾಹನದ ಚಾಲಕಿ ಮಂಜುಳಾ ಹರಿಜನ, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಇದ್ದರು.




ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮಾತನಾಡಿ, ಗ್ರಾಮೀಣ ಭಾಗದ ಜನರು ಕಸವನ್ನು ಎಲ್ಲೆಂದರಲ್ಲಿ ಚೆಲ್ಲಿ ಪರಿಸರ ಹಾಳು ಮಾಡುವ ಬದಲು ನಿಮ್ಮ ಬಾಗಿಲಿಗೆ ಬರುವ ಕಸ ವಿಲೇವಾರಿ ವಾಹನಗಳಿಗೆ ಕಸ ಹಾಕುವ ಕಾರ್ಯ ಮಾಡಬೇಕು. ಇಂತಹ ಕಸ ಸಾಗಿಸುವ ವಾಹನದ ಚಾಲನೆಯನ್ನು ಮಹಿಳೆಯರು ಮಾಡುತ್ತಿರುವುದು ಶ್ಲಾಘನೀಯ ಎಂದರು.

### ಕೃಷಿ ಪ್ರಶಸ್ತಿ ಯೋಜನೆಯಡಿ ಮುಂಗಾರು ಹಂಗಾಮಿನ

# ಬೆಳೆ ಸ್ಪರ್ಧೆಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕೃಷಿ ಉತ್ಪಾದನೆ ಗಣನೀಯ ಪ್ರಮಾಣದಲ್ಲಿ ಹೆಚ್ಚಳವಾಗಲು ರೈತರ ಶ್ರಮ ಮತ್ತು ಕೃಷಿಯಲ್ಲಿ ಸಕ್ರಿಯ ಪಾಲುಗಾರಿಕೆ ಪ್ರಮುಖ ಕಾರಣವಾಗಿದೆ. ಅಂತಹ ರೈತರನ್ನು ಗುರುತಿಸಲು ರಾಜ್ಯ, ಜಿಲ್ಲಾ ಮತ್ತು ತಾಲೂಕು ಮಟ್ಟಗಳಲ್ಲಿ ಕೃಷಿ ಪ್ರಶಸ್ತಿ, ಬಹುಮಾನಗಳನ್ನು ನೀಡಲಾಗುತ್ತಿದೆ.

ಈ ಯೋಜನೆಯಡಿಯಲ್ಲಿ ವಿವಿಧ ಹಂತಗಳಲ್ಲಿ ಆಯ್ಕೆ ಮಾಡಲಾದ ಬೆಳೆಗಳಲ್ಲಿ ಬೆಳೆ ಸ್ಪರ್ಧೆ ನಡೆಸಿ ಪ್ರತಿ ಬೆಳೆಗೂ ಮೂರು ಬಹುಮಾನಗಳನ್ನು ನೀಡಲಾಗುತ್ತಿದೆ. ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಹಾಗೂ ಉತ್ಪಾದಕತೆ ಹೆಚ್ಚಿಸಲು ರೈತರಲ್ಲಿ ಒಂದು ಆರೋಗ್ಯಕರ ಸ್ಪರ್ಧಾತ್ಮಕ ಮನೋಭಾವನೆಯನ್ನು ಬೆಳೆಸುವುದೇ ಈ ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ.

ಕೃಷಿ ಪ್ರಶಸ್ತಿಗಾಗಿ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ನೋಂದಾಯಿಸಬೇಕಿದೆ. ಇದಕ್ಕಾಗಿ ಕೃಷಿ ಇಲಾಖೆಯ ಕೆ-ಕಿಸಾನ್ ಪೋರ್ಟಲ್‌ನಲ್ಲಿ ನೂತನವಾಗಿ ಕೃಷಿ ಪ್ರಶಸ್ತಿಗೆ ಅರ್ಜಿ ನಮೂನೆಯನ್ನು



ಅಳವಡಿಸಲಾಗಿದ್ದು, ಸಿಟಿಜನ್ ಲಾಗಿನ್ ಅಥವಾ ರೈತ ಸಂಪರ್ಕ ಕೇಂದ್ರದ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ/ಸೇವಾ ಕೇಂದ್ರ/ಸ್ವತಃ, ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಎಫ್.ಐ.ಡಿ (ಫ್ರೂಟ್ಸ್ ಐಡೆಂಟಿಫಿಕೇಶನ್) ಯನ್ನು ಬಳಸಿಕೊಂಡು ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

2025-26ನೇ ಸಾಲಿಗೆ ಗದಗ ಜಿಲ್ಲೆಯಲ್ಲಿ ಕೃಷಿ ಪ್ರಶಸ್ತಿ ಯೋಜನೆಯಡಿ ಬೆಳೆ ಸ್ಪರ್ಧೆಗಾಗಿ ಮುಂಗಾರು ಹಂಗಾಮಿನಲ್ಲಿ ನೋಂದಾಯಿಸಬಹುದಾದ ಬೆಳೆಗಳು-(ಮಳೆಯಾಶ್ರಿತ) ಹೆಸರು, ಗೋವಿನ ಜೋಳ, ಶೇಂಗಾ.

ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಅರ್ಜಿ ಶುಲ್ಕ ರಹಿತವಾಗಿರುತ್ತದೆ.

**ಅಗತ್ಯ ದಾಖಲೆಗಳು**

ಪಹಣಿ ಪತ್ರಿಕೆ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಾದಲ್ಲಿ ಜಾತಿ ಪ್ರಮಾಣ ಪತ್ರ, ರೈತರ ಛಾಯಾಚಿತ್ರ, ಗುರುತಿನ ಚೀಟಿ, ಬ್ಯಾಂಕ್ ಪುಸ್ತಕದ ಪ್ರತಿ ಇತ್ಯಾದಿ.

2025-26ನೇ ಸಾಲಿಗೆ ಮುಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನಾಂಕವಾಗಿದೆ. ಸದರಿ ಬೆಳೆ ಬೆಳೆದ ಆಸಕ್ತ ರೈತರು ಬೆಳೆ ಸ್ಪರ್ಧೆ ಯೋಜನೆಯಡಿ ಶುಲ್ಕರಹಿತವಾಗಿ ತಮಗೆ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳ ಮೂಲಕ ಅಥವಾ ಸ್ವತಃ ಆನ್‌ಲೈನ್ ಮೂಲಕ (kkisan.karnataka.gov.in) ಲಿಂಕ್ ಬಳಸಿ ನೋಂದಾಯಿಸಿಕೊಳ್ಳಲು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು.

# ಶ್ರೀ ಚನ್ನವೀರ ಶರಣರ ಪುಣ್ಯ ಸ್ಮರಣೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕ್ಕೇನಕೊಪ್ಪದ ಶ್ರೀ ಚನ್ನವೀರ ಶರಣರ 30ನೇ ಪುಣ್ಯ ಸ್ಮರಣೋತ್ಸವ ಜುಲೈ 13ರಂದು ರವಿವಾರ ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಆನಂದರಾವ ಸರ್ಕಲ್‌ನ ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ಸಮಸ್ತ ಶ್ರೀ ಶರಣರ ಬಳಗ ಬೆಂಗಳೂರು ಅವರ ಸಹಯೋಗದಲ್ಲಿ ಜರುಗುವುದು.

ಸುಕ್ಷೇತ್ರ ಬಳಗಾನೂರಿನ ಪರಮಪೂಜ್ಯ ಶ್ರೀ ಶಿವಶಾಂತವೀರ ಶರಣರು ಪಾವನ ಸನ್ನಿಧಾನ ವಹಿಸುವರು. ಬೆಂಗಳೂರಿನ ಉಚ್ಚ ನ್ಯಾಯಾಲಯದ ಗೌರವಾನ್ವಿತ ನ್ಯಾಯಮೂರ್ತಿಗಳಾದ ವಿ. ಶ್ರೀಶಾನಂದ ಅವರು ಸಮಾರಂಭವನ್ನು ಉದ್ಘಾಟಿಸುವರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಇಳಕಲ್ಲನ ಡಾ. ಶಂಭು ಬಳಿಗಾರ ವಿಶೇಷ ಉಪನ್ಯಾಸ ನೀಡುವರು.

ಇದೇ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪುರಸ್ಕೃತರಾದ ಕನಕಗಿರಿಯ ವಾಣಿಜ್ಯ ತೆರಿಗೆ ಇಲಾಖೆಯ ಉಪ ಆಯುಕ್ತ ವಿಜಯಕುಮಾರ ಮರಿಯಪ್ಪ ಭತ್ತದ ಶಿವಮೊಗ್ಗ ಇವರಿಗೆ ಗೌರವ ಸಮ್ಮಾನ ಜರುಗುವುದು. ಸ್ವಾಗತ ಸಮಿತಿಯ ಗೌರವಾಧ್ಯಕ್ಷ, ಮಾಜಿ ಸಚಿವ ಅಲ್ಲಂ ವೀರಭದ್ರಪ್ಪ, ಗೌರವ ಉಪಾಧ್ಯಕ್ಷ, ಕೇಂದ್ರ ಮಾಜಿ ಸಚಿವ ಬಸವರಾಜ ಪಾಟೀಲ ಅನ್ವರಿ, ವಿಧಾನಪರಿಷತ್ ಮಾಜಿ ಸಭಾಪತಿ ವೀರಣ್ಣ ಮತ್ತಿಕಟ್ಟಿ, ಬಿ.ಎಂ. ಭತ್ತದ ಹಾಗೂ ಸಮಸ್ತ ಶರಣ ಬಳಗದ ಸರ್ವ ಪದಾಧಿಕಾರಿಗಳು ಉಪಸ್ಥಿತರಿರುವರು. ಬೆಂಗಳೂರಿನ ವೆ.ಚಿ. ಅರುಣಕುಮಾರ ಹಾಗೂ ಕಲಾತಂಡದವರಿಂದ ಭಕ್ತಿ ಸಂಗೀತ ಜರುಗುವುದು. ಬೆಂಗಳೂರಿನ ಜಯಶರಣ ಸಲ್ಯೂಷನ್ಸ್‌ನ ಅನ್ನದಾನಿ ಹಿರೇಮಠ ಅವರಿಂದ ಪ್ರಸಾದದ ಭಕ್ತಿ ಸೇವೆ ಜರುಗುವುದು ಎಂದು ಪ್ರಕಟಣೆ ತಿಳಿಸಿದೆ.

# ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಮುಷ್ಕರ




■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಕೇಂದ್ರ ಸರ್ಕಾರಗವು ಅಭಿವೃದ್ಧಿಯ ಹೆಸರಿನಲ್ಲಿ ಕಾರ್ಪೋರೇಟ್ ಕಂಪನಿಗಳನ್ನು ಸೇವಕರನ್ನಾಗಿ ಮಾಡಲು ಹೊರಟು ವೇತನ ಸಂಹಿತೆ, ಕೈಗಾರಿಕಾ ಸಂಹಿತೆ, ಕಾನೂನು ಔದ್ಯೋಗಿಕ ಸುರಕ್ಷತೆ, ಮತ್ತು ಕೈಗಾರಿಕಾ ಬಾಂಧವ್ಯ ಸಂಹಿತೆ ಸೇರಿ 29 ಕಾನೂನುಗಳನ್ನು ರೂಪಿಸಿರುವುದು ಖಂಡನೀಯವೆಂದು ಎಐಟಿಯುಸಿ ರಾಜ್ಯ ಸಮಿತಿ ಸದಸ್ಯ ಗುಡಿಹಳ್ಳಿ ಹಾಲೇಶ್ ಆರೋಪಿಸಿದರು.

ಹರಪನಹಳ್ಳಿ ನಗರದ ಜಂಟಿ ಕಾರ್ಮಿಕ ಸಂಘಟನೆಗಳ ಸಮಿತಿ ಹಾಗೂ ರೈತ ಕಾರ್ಮಿಕ ವರ್ಗದಿಂದ ಬುಧವಾರ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಹಮ್ಮಿಕೊಂಡಿದ್ದ ಸಾರ್ವತ್ರಿಕ ಮುಷ್ಕರದಲ್ಲಿ ಅವರು ಮಾತನಾಡಿದರು.

ದೇಶದಲ್ಲಿ ಅತಿಹೆಚ್ಚು ಅಸಂಘಟಿತ ಮತ್ತು ಅನೌಪಚಾರಿಕ ಕಾರ್ಮಿಕರನ್ನು ಕಾನೂನು ಅಡಿಯಲ್ಲಿ ತರಬೇಕು ಮತ್ತು ಕಾರ್ಮಿಕರಿಗೆ ದಿನಕ್ಕೆ 600 ರೂಗಳ ವೇತನ ನಿಗದಿ ಮಾಡಬೇಕೆಂಬ ಕಾರ್ಮಿಕ ಸಂಘಟನೆಗಳ ಬೇಡಿಕೆಯನ್ನು ಕೇಂದ್ರ ಸರ್ಕಾರ ತಿರಸ್ಕರಿಸಿದೆ. ಇದು ಖಂಡನೀಯ ಮತ್ತು ಕಾರ್ಮಿಕರಿಗೆ ಮಾಡುತ್ತಿರುವ ಅನ್ಯಾಯವೆಂದರು.

ಎಐಸಿಸಿಟಿಯು ಜಿಲ್ಲಾಧ್ಯಕ್ಷ ಸಂದೇರ ಪರಶುರಾಮ್ ಮಾತನಾಡಿ, ತೆರಿಗೆಗಳ ಭಾರ ಮತ್ತು ಬೆಲೆ ಏರಿಕೆಯಿಂದ ಜನತೆ ತೀವ್ರ ಸಂಕಷ್ಟದ ಸ್ಥಿತಿಗೆ ತಲುಪುವಂತಾಗಿದೆ. ಕಾರ್ಮಿಕರ ಸಮಾನ ಕೆಲಸಕ್ಕೆ ಸಮಾನ ವೇತನ ತಕ್ಷಣ ಜಾರಿಯಾಗಬೇಕು. ಎಲ್ಲಾ ಸಂಘಟಿತ ಕಾರ್ಮಿಕ ವರ್ಗಕ್ಕೆ ಕನಿಷ್ಠ ವೇತನ ನಿಗದಿಪಡಿಸಬೇಕೆಂದು ಒತ್ತಾಯಿಸಿದರು.

ಸಿಪಿಐ ತಾಲೂಕು ಕಾರ್ಯದರ್ಶಿ ಸಂತೋಷ್ ಎಚ್.ಎಂ ಮಾತನಾಡಿ, ವಿದ್ಯುತ್ ತಿದ್ದುಪಡಿ ಮಸೂದೆ-2022 ಹಿಂಪಡೆಯಬೇಕು, ರೈತರ ಬೆಳೆಗಳಿಗೆ ಬೆಂಬಲ ಬೆಲೆ ನಿಗದಿಗೊಳಿಸಿ ಬಿತ್ತನೆ ಬೀಜ, ರಸಗೊಬ್ಬರ ಮತ್ತು ವಿದ್ಯುತ್ ಮೇಲಿನ ಸಬ್ಸಿಡಿ ದರವನ್ನು ಹೆಚ್ಚಿಸಬೇಕು, ಸಮಗ್ರ ಸಾಲ ಮನ್ನಾ ಹಾಗೂ ಬೆಳೆ ವಿಮೆ ಯೋಜನೆಗಳನ್ನು ಜಾರಿಗೆ ತರಬೇಕೆಂದರು.

ಈ ಸಂದರ್ಭದಲ್ಲಿ ಸಿಪಿಐಎಮ್‌ಎಲ್ ಜಿಲ್ಲಾ ಮುಖಂಡ ಸಂತೋಷ್ ಗುಳೇದ ಹಟ್ಟಿ, ಸಿಪಿಎಂ ಮುಖಂಡ ರಹಮತ್, ಹುಲಿಕಟ್ಟಿ ಮೈಲಪ್ಪ, ಕರಡಿ ದುರ್ಗದ ಚೌಡಪ್ಪ ರೈತ ಸಂಘದ ಮುಖಂಡ, ಬಳಿಗನೂರು ಕೊಟ್ರೇಶ್, ಪೂಜಾರ್ ಬಸವರಾಜ್, ಎಚ್. ವೆಂಕಟೇಶ್, ಪುಷ್ಪ, ಅರುಣ್ ಕುಮಾರ್, ಎಸ್. ಪರುಶುರಾಮ್, ಗೌರಿಹಳ್ಳಿ ಹನುಮಂತ, ಕುಂಚೂರು ಶಫಿವುಲ್ಲಾ, ನಟರಾಜಪ್ಪ, ಬಿ ಭಾಗ್ಯಮ್ಮ ಮುಂತಾದವರಿದ್ದರು.



ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಲಕ್ಷ್ಮೇಶ್ವರ ಘಟಕದಿಂದ ಬುಧವಾರ ಪಟ್ಟಣದ ಮುನ್ಸಿಪಲ್ ಪದವಿ ಕಾಲೇಜಿನಲ್ಲಿ ಸ್ವಚ್ಛತಾ ಕಾರ್ಯದೊಂದಿಗೆ ಸಸಿ ನೆಡುವ ಮೂಲಕ ಎಬಿವಿಪಿ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಲಾಯಿತು. ಈ ವೇಳೆ ಎಬಿವಿಪಿ ರಾಜ್ಯ ಕಾರ್ಯಕಾರಣಿ ಸದಸ್ಯ ಅಭಿಷೇಕ ಉಮಚಗಿ, ಜಿಲ್ಲಾ ಸಂಚಾಲಕ ಪ್ರಕಾಶ ಕುಂಬಾರ, ನಗರ ಸಹ ಕಾರ್ಯದರ್ಶಿ ಯಶವಂತ ಶಿರಹಟ್ಟಿ, ವಿನಯ್ ಕುಂಬಾರ, ಕಿರಣ್ ಗುಡಿಗೇರಿ, ವೀರೇಶ್ ಕುಂಬಾರ, ಹನುಮಂತ ಹುಳಿಕೊಪ್ಪ, ಮಾಂತೇಶ ಕುರಿ, ಎಬಿವಿಪಿ ಕಾರ್ಯಕರ್ತರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಹಡಪದ ಅಪ್ಪಣ್ಣನವರು ವಿಶ್ವಮಾನ್ಯರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿವಶರಣ ಹಡಪದ ಅಪ್ಪಣ್ಣನವರ ವಚನ ಸಾಹಿತ್ಯದ ಶ್ರೇಷ್ಠ ಚಿಂತನೆಗಳು ಸಮಾಜದ ಪ್ರಗತಿಗೆ ದಾರಿದೀಪವಾಗಿವೆ ಎಂದು ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಹೇಳಿದರು.

ಅವರು ಗುರುವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಹಡಪದ ಅಪ್ಪಣ್ಣನವರ ಜಯಂತಿ ಆಚರಣೆ ಸಂದರ್ಭದಲ್ಲಿ ಮಾತನಾಡಿದರು.

ಬಸವಣ್ಣನವರ ಅನುಯಾಯಿಯಾಗಿದ್ದ ಹಡಪದ ಅಪ್ಪಣ್ಣ ಅವರು ಸಾಮಾಜಿಕ ಅಸಮಾನತೆ, ಅಸ್ಪೃಶ್ಯತೆ, ಜಾತಿ ವ್ಯವಸ್ಥೆ, ಕಂದಾಚಾರ, ಮೂಢನಂಬಿಕೆ ಹೋಗಲಾಡಿಸಿ ಸಮಸಮಾಜ ನಿರ್ಮಾಣಕ್ಕಾಗಿ ಶ್ರಮಿಸಿದ್ದಾರೆ. ಶರಣರು, ಸಂತರು, ದಾರ್ಶನಿಕರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸದೇ ವಿಶ್ವಮಾನ್ಯವಾಗಿಸಬೇಕು. ತತ್ವಾದರ್ಶಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಂಡಾಗ ಬದುಕು ಹಸನಾಗುತ್ತದೆ ಎಂದು ಹೇಳಿದರು.

ಹಡಪದ ಸಮಾಜದ ತಾಲೂಕಾಧ್ಯಕ್ಷ ಗುಡ್ಡಪ್ಪ ಹಡಪದ ಮಾತನಾಡಿ, ರಾಜ್ಯದಲ್ಲಿ ಹಡಪದ ಸಮಾಜದವರು ಸರಕಾರದ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಈ ಸಮಾಜವನ್ನು ಪ್ರವರ್ಗ 1ಕ್ಕೆ ಸೇರಿಸಬೇಕು. ಸಮಾಜದ ನಿಗಮ ಮಂಡಳಿ ಸ್ಥಾಪಿಸಬೇಕು. ಕ್ಷೌರಿಕ ವೃತ್ತಿದಾರರಿಗೆ ಸ್ಥಳೀಯ ಸಂಸ್ಥೆಗಳ ಮೂಲಕ ಕುಲಕಸುಬು ಆಧಾರಿತ ಸಲಕರಣೆಗಳನ್ನು ಪೂರೈಸಲು ಸರ್ಕಾರ ಆದೇಶಿಸಬೇಕು ಎಂದರು.

ಈ ವೇಳೆ ಅಮರೇಶ ತೆಂಬದಮನಿ, ಎನ್.ಎಚ್. ಹಡಪದ, ವಿನೋದ ನಾವಿ, ಶಂಕರ ನಾವಿ, ಮುತ್ತಪ್ಪ ನಾವಿ, ದುಂಡಪ್ಪ ಹಡಪದ, ನಾಗರಾಜ ಹಡಪದ, ನಿಂಗಪ್ಪ ಹಡಪದ, ಮಂಜುನಾಥ ಹಡಪದ ಸೇರಿದಂತೆ ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳು ಇದ್ದರು. ಸ್ಥಳೀಯ ಪುರಸಭೆ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಸರ್ಕಾರಿ ಕಚೇರಿ, ಶಾಲಾ-ಕಾಲೇಜುಗಳಲ್ಲಿ ಹಡಪದ ಅಪ್ಪಣ್ಣನವರ ಜಯಂತಿ ಆಚರಿಸಲಾಯಿತು.



# ಗುರುಗಳಿಗೆ ಗೌರವ ನಮನ, ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ 1988-1989ನೇ ಸಾಲಿನ ವಿದ್ಯಾರ್ಥಿಗಳಿಂದ ಗುರು ಪೌರ್ಣಿಮೆ ಅಂಗವಾಗಿ ಗುರುಗಳಿಗೆ ಗೌರವ ಸಮರ್ಪಣೆ, ಸನ್ಮಾನ ಕಾರ್ಯಕ್ರಮ ಜರುಗಿತು.

ಗುರುಗಳಾದ ಎಸ್.ಬಿ. ಇನಾಮತಿ, ಜಿ.ಪಿ. ದೇಶಪಾಂಡೆ, ಡಿ.ಎಂ. ಬಂಡಿ, ಆರ್.ಎಚ್. ಬಂಡಿ, ಕೆ.ಎಸ್. ಪಾಟೀಲ, ಪಿ.ವ್ಹಿ. ಶೇಷಗಿರಿ ಎ.ಎಂ. ಬದಾಮಿ ಇವರುಗಳ ಮನೆಗೆ ತೆರಳಿ ಸನ್ಮಾನಿಸಿದರೆ, ಕೆ.ಎನ್. ಪಾಪಳೆ ಅವರನ್ನು ನಿವೃತ್ತಿಯ ನಿಮಿತ್ತ ಸನ್ಮಾನಿಸಲಾಯಿತು.

ಈ ಸಂರ್ಭದಲ್ಲಿ ಶೈನಾಜ್ ಅಣ್ಣಿಗೇರಿ, ಮಧು ಜನಗೌಡ್ರ, ಮಹಾದೇವಿ ಚಳ್ಳಣ್ಣವರ, ಶೋಭಾ ಹಿಡ್ಕಿಮಠ, ಬಸವರಾಜ ಹೂಗಾರ, ಚನ್ನು ನಾಗಾವಿ, ಗೋಣೆಪ್ಪ ಉಮ್ಮಣ್ಣವರ, ಜೆ.ಡಿ. ಕುಕನೂರ, ಸಿದ್ದು ಹುಬ್ಬಳ್ಳಿ, ಶ್ರೀನಿವಾಸ ವಲ್ಲೂರು, ಉಮೇಶ ಸಜ್ಜನ, ಶ್ರೀಧರ್ ಅಥೋನಿ, ಮಹಮ್ಮದ್ ರಫೀಕ ಕಾಗದಗಾರ ಮುಂತಾದವರು ಉಪಸ್ಥಿತರಿದ್ದರು.

### ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಮಾಲಿಕೆಯಲ್ಲಿ ಡಿಡಿಪಿಐ ಆರ್.ಎಸ್. ಬುರಡಿ

# ವಿದ್ಯಾರ್ಥಿಗಳು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಲಿ

## ಉರ್ದು ಶಾಲೆಯಲ್ಲಿ

ಗದುಗಿನ ಹಳೇ ಬಸ್ ನಿಲ್ದಾಣದ ಬಳಿಯಿರುವ ಸರ್ಕಾರಿ ಉರ್ದು ಪ್ರೌಢಶಾಲೆಯ ವಿದ್ಯಾರ್ಥಿಗಳಾದ ರೆಹಮತ್ ಉನ್ನಿಸಾ ಬೋದ್ಲೇಖಾನ್, ಅತೀಕಾ ಮಕಾನದಾರ, ಆಶಾ ಮಮ್ಮುನವರ, ಫಾಯಿಜಾ ಅಡವಿಸೋಮಾಪೂರ ಹಾಗೂ ಸುಹಾನ ಇಸ್ರಾರ್ ಬಬರ್ಚಿ ಅವರುಗಳಿಗೆ ಪ್ರತಿಭಾ ಪುರಸ್ಕಾರದ ಚೆಕ್, ಪ್ರಮಾಣ ಪತ್ರ, ಕಾಲೇಜು ಬ್ಯಾಗ್‌ಗಳನ್ನು ನೀಡಿ ಗೌರವಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ಪ್ಯಾರಅಲಿ ನೂರಾನಿ ದಂಪತಿಗಳು ವಿದ್ಯಾರ್ಥಿಗಳಿಗೆ ಹಿತೋಪದೇಶ ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಮಾತನಾಡಿ, ಗುರುಗಳಾದ ಬಿ.ಜಿ. ಅಣ್ಣಿಗೇರಿ ಪ್ರತಿಷ್ಠಾನವು ಸರ್ಕಾರಿ ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಿ ಗೌರವಿಸುತ್ತಿರುವುದು ನಿಜವಾದ ಗುರುವಂದನೆಯಾಗಿದೆ ಎಂದರು.



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಸರ್ಕಾರ ಹಲವು ಸೌಲಭ್ಯಗಳನ್ನು ನೀಡುವ ಮೂಲಕ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿ ಹಾಗೂ ಸರ್ಕಾರಿ ಶಾಲೆಗಳ ಬಲವರ್ಧನೆಗೆ ಮುಂದಾಗಿದ್ದು, ವಿದ್ಯಾರ್ಥಿಗಳು ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಡಿಡಿಪಿಐ ಆರ್.ಎಸ್. ಬುರಡಿ ಹೇಳಿದರು.

ಅವರು ಗುರುವಾರ ಗದುಗಿನ ಸಿದ್ಧಲಿಂಗ ನಗರದ ಸರ್ಕಾರಿಪ್ರೌಢ ಶಾಲೆಯಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಎಸ್.ಎಸ್. ಎಲ್.ಸಿಯಲ್ಲಿ ಮೊದಲ 5 ಸ್ಥಾನ ಪಡೆದುಕೊಂಡ ಗದಗ ತಾಲೂಕಿನ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಣಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡುವದು, ದುಶ್ಚಟಗಳನ್ನು ರೂಢಿಸಿಕೊಳ್ಳುವದು ಸಲ್ಲದು. ಹಾಗೆಯೇ ಟಿವಿ ಮತ್ತು ಮೊಬೈಲ್‌ಗಳನ್ನು ಅಗತ್ಯವಿದ್ದರೆ ಮಾತ್ರ ಬಳಕೆ ಮಾಡಬೇಕು. ಜ್ಞಾನಾರ್ಜನೆಗೆ, ಸಂಪರ್ಕಕ್ಕೆ ಅಗತ್ಯಕ್ಕೆ ತಕ್ಕಂತೆ ಉಪಯೋಗಿಸಬೇಕು ಎಂದರು.

ಶಾಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಸ್ಫೂರ್ತಿ ಉಡಚಗೊಂಡ, ಲಕ್ಷ್ಮೀ ನಲುಡಿ, ಕೀರ್ತಿ ನಾಯ್ಕರ್, ಶಾಕಾಂಬರಿ ನರೇಗಲ್ಲ, ಜ್ಯೋತಿ ಹೇಮಾದ್ರಿ ಅವರುಗಳಿಗೆ ಪ್ರತಿಭಾ ಪುರಸ್ಕಾರದ ಚೆಕ್, ಪ್ರಮಾಣ ಪತ್ರ, ಕಾಲೇಜು ಬ್ಯಾಗ್‌ಗಳನ್ನು ನೀಡಿ ಶಾಲೆಯ ಎಲ್ಲ ಮಕ್ಕಳಿಗೆ ಸಿಹಿ ವಿತರಿಸಿ ಶುಭ ಕೋರಲಾಯಿತು. ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಪ್ರತಿಷ್ಠಾನದ ಕಾರ್ಯಚಟುವಟಿಕೆಗಳನ್ನು ವಿವರಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ಸುಭಾಸಚಂದ್ರ ಬೆಟದೂರ, ಖಜಾಂಚಿ ವಿಜಯಲಕ್ಷ್ಮೀ ಅಂಗಡಿ, ನಿರ್ದೇಶಕರಾದ ಡಾ. ಶರಣಬಸವ ಚೌಕಿಮಠ, ಡಾ. ಬಸಯ್ಯ ಬೆಳ್ಳೇರಿಮಠ, ಶಿವಪ್ಪ ಕತ್ತಿ, ಆಂಜನೇಯ ಕಟಗಿ, ಸಿದ್ಧಲಿಂಗನಗೌಡ ಪಾಟೀಲ, ಡಾ. ಬಸವರಾಜ ಚನ್ನಪ್ಪಗೌಡ್ರ, ಭಾರತಿ ಪಾಟೀಲ, ನೇಹಾ, ಸುಧಾರಾಣಿ, ಪ್ರಸನ್‌ಕುಮಾರ ಗುತ್ತಿ ಮುಂತಾದವರು ಪಾಲ್ಗೊಂಡಿದ್ದರು.

ಅಧ್ಯಕ್ಷತೆಯನ್ನು ಜೆ.ಬಿ. ಅಣ್ಣಿಗೇರಿ ವಹಿಸಿದ್ದರು. ಗಂಗಾ ಅಳವಡಿ ಸ್ವಾಗತಿಸಿದರು. ಎಸ್.ಎ. ಬಾಣದ ನಿರೂಪಿಸಿ ವಂದಿಸಿದರು.

# ಮೀನುಗಾರಿಕೆ ಕೃಷಿಯು ಅತ್ಯಂತ ಸುಲಭವಾಗಿದೆ




■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಂತ್ರಿಕವಾಗಿ ಮೀನುಗಾರಿಕಾ ಕ್ಷೇತ್ರ ಅತ್ಯುತ್ತಮವಾಗಿ ಬೆಳವಣಿಗೆಯಾಗಿದ್ದು, ಮೀನುಗಾರಿಕೆ ಕೃಷಿಯು ಅತ್ಯಂತ ಸುಲಭವಾಗಿದೆ ಎಂದು ವಿಜಯನಗರ ಮೀನುಗಾರಿಕೆ ಇಲಾಖೆಯ ಉಪನಿರ್ದೇಶ ಮಲ್ಲೇಶ್ ಬಿ ತಿಳಿಸಿದರು.

ನಗರದ ತಾಲೂಕು ಪಂಚಾಯಿತಿಯ ಸಾಮರ್ಥ್ಯ ಸೌಧದಲ್ಲಿ ಗುರುವಾರ ಮೀನುಗಾರಿಕಾ ಇಲಾಖೆ ವತಿಯಿಂದ ನಡೆದ ರಾಷ್ಟ್ರೀಯ ಮೀನು ಕೃಷಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೆಲ ದಶಕಗಳ ಹಿಂದೆ ಮೀನುಗಾರಿಕಾ ಕ್ಷೇತ್ರವು ಮಂದಗತಿಯಲ್ಲಿ ಸಾಗುತ್ತಿತ್ತು. ಆದರೆ 1947ರ ಕಾಲಘಟ್ಟದಲ್ಲಿ ಹಿರಾನಂದ ಚೌದರಿ ಹಾಗೂ ಹನಿಕುನಿ ಎನ್ನುವ ವಿಜ್ಞಾನಿಗಳ ಪರಿಶ್ರಮದಿಂದ ಮೀನುಗಾರಿಕಾ ಕ್ಷೇತ್ರವು ಸಾಕಷ್ಟು ಅಭಿವೃದ್ಧಿ ಹೊಂದಿತು. ಇಂದು ಮಾರುಕಟ್ಟೆಯಲ್ಲಿ ಸುಲಭವಾಗಿ ಎಲ್ಲಾ ರೀತಿಯ ಮೀನಿನ ಮೊಟ್ಟೆಗಳಿಂದ ಹಿಡಿದು ವಿವಿಧ ಜಾತಿಯ ಮೀನುಗಳನ್ನು ಪಡೆಯಬಹುದಾಗಿದೆ ಎಂದರು.

ಮಾಲವಿ ಮೀನು ಪಾಲನಾ ಕೇಂದ್ರ ಉಪನಿರ್ದೇಶಕ ರಿಜ್ವಾನ್ ಆಹ್ಮದ್ ಮಾತನಾಡಿ, ಮೀನಿನಲ್ಲಿ ಸಾಕಷ್ಟು ಔಷಧಿಯ ಗುಣಗಳು ಇದ್ದು, ಮಾನವನ ದೇಹದ ಪ್ರಮುಖ ಅಂಗಾಂಗಗಳ ಬೆಳವಣಿಗೆ ಮತ್ತು ಪಿಟ್ಯುಟರಿ ಗ್ರಂಥಿ ಬಲವರ್ಧನೆಗೆ ಉಪಯುಕ್ತವಾಗಿದೆ. ದೇಶದಲ್ಲಿ 2.8 ಕೋಟಿ ಜನಗಳು ಮೀನುಗಾರಿಕಾ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದರು.

ಕೂಡ್ಲಿಗಿ ಮೀನುಗಾರಿಕಾ ಸಹಾಯಕ ನಿರ್ದೇಶಕ ರಜನೀಶ್ ದೇಸಾಯಿ ಮಾತನಾಡಿ, ಬೆಳೆ ಬೆಳೆಯಲು ಯೋಗ್ಯವಲ್ಲದ ತಮ್ಮ ಜಮೀನುಗಳಲ್ಲಿ ಮೀನುಗಾರಿಕೆಯನ್ನು ಪ್ರಾರಂಭಿಸಿ ರೈತರು ಸಾಕಷ್ಟು ಆದಾಯ ಗಳಿಕೆ ಮಾಡಿಕೊಳ್ಳಬಹುದಾಗಿದೆ ಎಂದರು.

ಮೀನುಗಾರಿಕಾ ಕ್ಷೇತ್ರದಲ್ಲಿ ವಿಶೇಷ ಸಾಧನೆಗೈದ ಗಂಗಮ್ಮ ಪವಾಡಿ, ನಾಗೇಂದ್ರಪ್ಪ, ಪರುಸಪ್ಪ, ಕೊಟ್ರಪ್ಪ ಇವರನ್ನು ಸನ್ಮಾನಿಸಲಾಯಿತು. ಶಾಂತಕುಮಾರ್, ಮಂಜುನಾಥ, ಮಲ್ಯಾನಾಯ್ಕ, ಮೋರಿಗೆರೆ ಹೇಮಣ್ಣ, ಖಾಜಾ ಹುಸೇನ್, ನೀಲಪ್ಪ, ನಾಗೇಂದ್ರಪ್ಪ, ಮೀನುಗಾರ ಸಹಕಾರ ಸಂಘದ ಪದಾಧಿಕಾರಿಗಳಾದ ಎನ್. ರವಿ, ಆನಂದ, ದ್ಯಾಮಜ್ಜಿ ಹನುಮಂತ, ತಿಮ್ಮಣ್ಣ, ತಿಪ್ಪನಹಳ್ಳಿ ಮಂಜುನಾಥ, ಸಿದ್ದೇಶ್ ಬಿ, ಅಂಬಿ ರಾಜಪ್ಪ, ಅಂಜಿನಪ್ಪ, ಭೀಮಪ್ಪ, ಕುಲುಮಿ ವೀರಣ್ಣ, ಹಿರೇಮೇಗಳಗೇರಿ ನಾಗರಾಜ, ಹುಲಿಕಟ್ಟಿ ಸಾತಲಿಂಗಪ್ಪ, ಶಿಗ್ರಿಹಳ್ಳಿ ಗುಡ್ಡಪ್ಪ, ಕಂಚಿಕೆರೆ ಅಂಜಿನಪ್ಪ ಮುಂತಾದವರಿದ್ದರು.

# ಹಡಪದ ಅಪ್ಪಣ್ಣ ಸಾಮಾಜಿಕ ಕ್ರಾಂತಿಯ ಹರಿಕಾರ




■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಛೇರಿ ಹುಬ್ಬಳ್ಳಿಯಲ್ಲಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಅವರು ಶಿವಶರಣ ಹಡಪದ ಅಪ್ಪಣ್ಣರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜಯಂತಿ ಆಚರಣೆಗೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಪಿ.ಆರ್. ಕಿರಣಗಿ ಮಾತನಾಡಿ, ಶಿವಶರಣ ಶ್ರೀ ಹಡಪದ ಅಪ್ಪಣ್ಣನವರು 12ನೇ ಶತಮಾನದ ವಚನ ಚಳುವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಒಬ್ಬರು. ಇವರು ಬಸವಣ್ಣನವರ ಆಪ್ತವಲಯದಲ್ಲಿ ಗುರುತಿಸಲ್ಪಟ್ಟಿದ್ದರು. ಸಮಾಜದಲ್ಲಿರುವ ಮೇಲು, ಕೀಳು, ಮೂಢನಂಬಿಕೆ ಅಂಧ ಆಚರಣೆಗಳನ್ನು ಹೋಗಲಾಡಿಸಲು ಬಸವಣ್ಣನವರ ನೇತೃತ್ವದಲ್ಲಿ ಶ್ರಮಿಸಿದ್ದಾರೆ, ಅವರ ವ್ಯಕ್ತಿತ್ವವನ್ನು ಇಂದು ರೂಢಿಸಿಕೊಳ್ಳುವ ಅವಶ್ಯಕತೆ ಇದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ವಿವೇಕಾನಂದ ವಿಶ್ವಜ್ಞ, ಪಿ.ವೈ. ನಾಯಕ್, ಸಿದ್ದೇಶ್ವರ ಹೆಬ್ಬಾಳ, ಗಣೇಶ ರಾಠೋಡ್, ಶಶೀಧರ ಕುಂಬಾರ, ಜಗದಂಬಾ ಕೋಪರ್ಡೆ, ಶ್ರೀನಾಥ ಜಿ, ಅಧಿಕಾರಿಗಳಾದ ಎಂ.ಬಿ. ಕಪಲಿ, ನವೀನಕುಮಾರ ತಿಪ್ಪಾ, ದಯಾನಂದ ಪಾಟೀಲ, ಆರ್.ಎಲ್. ಭಜಂತ್ರಿ, ಕೇಂದ್ರ ಕಛೇರಿಯ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು. ವಿರೂಪಾಕ್ಷ ಕಟ್ಟಿಮನಿ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಯುವ ಕಾಂಗ್ರೆಸ್ ಪದಗ್ರಹಣ ಸಮಾರಂಭ ನಾಳೆ



■ವಿಜಯಸಾಕ್ಷಿ ಸುದ್ದಿ, ರೋಣ

ಜುಲೈ 12ರಂದು ಬೆಳಿಗ್ಗೆ 11ಕ್ಕೆ ಗದಗ ನಗರದ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜರುಗುವ ಯುವ ಕಾಂಗ್ರೆಸ್ ಪದಗ್ರಹಣ ಸಮಾರಂಭಕ್ಕೆ ರೋಣ ತಾಲೂಕಿನಿಂದ 10ಸಾವಿರ ಯುವಕರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ತಾಲೂಕಾ ಯುವ ಕಾಂಗ್ರೆಸ್ ಅಧ್ಯಕ್ಷ ಮುತ್ತುರಾಜ ನವಲಗುಂದ ಹೇಳಿದರು.

ಅವರು ಗುರುವಾರ ಲೋಕೋಪಯೋಗಿ ಇಲಾಖೆಯ ಪ್ರವಾಸಿ ಮಂದಿರದ ಸಭಾಂಗಣದಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿದರು.

ಗದಗ ಜಿಲ್ಲಾ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಆಯ್ಕೆಯಾದ ಕೃಷ್ಣಗೌಡ ಎಚ್.ಪಾಟೀಲ, ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದ ಅಕ್ಷಯ ಪಾಟೀಲ ಸೇರಿದಂತೆ ವಿವಿಧ ಹುದ್ದೆಗಳಿಗೆ ನೇಮಕವಾದ ಯುವ ಮುಖಂಡರುಗಳ ಪದಗ್ರಹಣ ಸಮಾರಂಭ ಇದಾಗಿದೆ.

ಪದಗ್ರಹಣ ಸಮಾರಂಭಕ್ಕೆ ಸಚಿವರಾದ ಪ್ರಿಯಾಂಕ ಖರ್ಗೆ, ಸಚಿವರಾದ ಸಂತೋಷ ಲಾಡ್, ಎಚ್.ಕೆ. ಪಾಟೀಲ, ಶಾಸಕ ಜಿ.ಎಸ್.ಪಾಟೀಲ ಸೇರಿದಂತೆ ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಶಾಸಕರು, ಅನೇಕ ಮುಖಂಡರು ಆಗಮಿಸಲಿದ್ದಾರೆ. ಪಕ್ಷದ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅನೇಕ ಯುವ ನಾಯಕರು ಸಹ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ತಾಲೂಕಿನ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಬೇಕು ಎಂದು ಕರೆ ನಿಡಿದರು.

ಉಪಾಧ್ಯಕ್ಷ ಅಸ್ಲಂ ಕೊಪ್ಪಳ, ಶಹರ ಘಟಕದ ಅಧ್ಯಕ್ಷ ಯಲ್ಲಪ್ಪ ಕಿರೇಸೂರ, ಉಪಾಧ್ಯಕ್ಷ ಗೋಪಿ ರಾಯನಗೌಡ್ರ, ಬ್ಲಾಕ್ ಕಮಿಟಿ ಉಪಾಧ್ಯಕ್ಷ ಸೋಮು ನಾಗರಾಜ, ಅಭಿಷೇಕ ನವಲಗುಂದ, ಆನಂದ ರಾಠೋಡ, ಬಶೀರ ಕಟ್ಟಿಮನಿ, ವಿನಾಯಕ ಜಕ್ಕನಗೌಡ್ರ, ಅಪ್ಪುರಾಜ ನವಲಗುಂದ, ಬಸವರಾಜ ಹೊಸಳ್ಳಿ, ಅಬ್ಬು ಹೊಸುರ, ಮಹೇಶ ಕಳಸಣ್ಣವರ ಸೇರಿದಂತೆ ಕಾಂಗ್ರೆಸ್ ಪಕ್ಷದ ಯುವ ಮುಖಂಡರು ಉಪಸ್ಥಿತರಿದ್ದರು.

### ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ನೂತನ ಪದಾಧಿಕಾರಿಗಳ ಪದಗ್ರಹಣ

# ಸಮಾಜಮುಖಿ-ಜನಮುಖಿ ಕಾರ್ಯ ಮಾಡಿ




■ವಿಜಯಸಾಕ್ಷಿ ಸುದ್ದಿ, ಗದಗ

ಲಯನ್ಸ್ ಕ್ಲಬ್‌ನ ಪದಾಧಿಕಾರಿಗಳು ಮತ್ತು ಸದಸ್ಯರು ಸಮಾಜಮುಖಿ ಹಾಗೂ ಜನಮುಖಿಯಾಗಿ ಕಾರ್ಯ ಮಾಡಬೇಕೆಂದು ಲಯನ್ಸ್ ಕ್ಲಬ್‌ನ ನಿಕಟಪೂರ್ವ ಜಿಲ್ಲಾ ಗವರ್ನರ್ ಡಾ. ರವಿ ನಾಡಗೇರ ಹೇಳಿದರು.

ಅವರು ಬುಧವಾರ ಲಯನ್ಸ್ ಶಾಲೆಯ ಸಭಾಂಗಣದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸಿ ಮಾತನಾಡಿದರು.

ಸಮಾಜ ಸೇವೆ ಮಾಡುವ ಮೂಲಕ ಅದರಲ್ಲಿ ಸಂತೃಪ್ತ ಭಾವನೆ ಕಾಣಲು ಇಂತಹ ಸಾಮಾಜಿಕ ಸಂಘಟನೆಗಳು ವೇದಿಕೆಯನ್ನು ಒದಗಿಸಬಲ್ಲವು. ಕ್ಲಬ್‌ಗಳಲ್ಲಿ ಎಲ್ಲರೂ ಸಂಘಟಿಕರಾಗಿ ಸೇರುವುದರಿಂದ ಸ್ನೇಹ ಬೆಳೆಯುವದರ ಜೊತೆಗೆ ನಾಯಕತ್ವದ ಗುಣಗಳು ಬೆಳೆದು ಬರುವವು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಲಯನ್ಸ್ ಕ್ಲಬ್‌ನ ನಿಕಟಪೂರ್ವ ಜಿಲ್ಲಾ ಗವರ್ನರ್‌ಗಳಾದ ಆನಂದ ಪೋತ್ನೀಸ್ ಹಾಗೂ ಸುಗ್ಗಲಾ ಯಳಮಲಿ ಮಾತನಾಡಿ, ಕ್ಲಬ್‌ನ ಪದಾಧಿಕಾರಿಗಳು, ಸದಸ್ಯರು ಕ್ಲಬ್‌ನ ಬಲವರ್ಧನೆಗೆ ಶ್ರಮಿಸಬೇಕು. ತನ್ಮೂಲಕ ಹೊಸ ಹೊಸ ಯೋಜನೆಗಳನ್ನು ಹಮ್ಮಿಕೊಂಡು ಜನತೆಗೆ ಹಾಗೂ ಸಮಾಜಕ್ಕೆ ಉಪಯುಕ್ತವಾದ ಕಾರ್ಯಗಳನ್ನು ಮಾಡಬೇಕೆಂದರು.

ಕ್ಲಬ್‌ನ ನೂತನ ಅಧ್ಯಕ್ಷರಾಗಿ ರಾಜು ವೇರ್ಣೆಕರ, ಉಪಾಧ್ಯಕ್ಷರಾಗಿ ಪ್ರವೀಣ ವಾರಕರ, ಡಾ. ನವೀನ ಹಿರೇಗೌಡ್ರ, ಡಾ. ತುಕಾರಾಮ ಸೂರಿ, ನಿಕಟಪೂರ್ವ ಅಧ್ಯಕ್ಷರಾಗಿ ನಿತೀಶ್ ಸಾಲಿ, ಕಾರ್ಯದರ್ಶಿಯಾಗಿ ರಾಜಣ್ಣ ಮಲ್ಲಾಡದ, ಜಂಟಿ ಕಾರ್ಯದರ್ಶಿಯಾಗಿ ಲಿಂಗರಾಜ ತೋಟದ, ಖಜಾಂಚಿಯಾಗಿ ರೇಣುಕಪ್ರಸಾದ ಹಿರೇಮಠ, ಸಹ ಖಜಾಂಚಿಯಾಗಿ ರೇಣುಕಪ್ರಸಾದ ಶಿಗ್ಲಿಮಠ ಅಧಿಕಾರ ವಹಿಸಿಕೊಂಡರು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಲೇಡಿಸ್ ವಿಂಗ್‌ನ ಅಧ್ಯಕ್ಷೆಯಾಗಿ ಪೂಜಾ ಪಾಟೀಲ, ಕಾರ್ಯದರ್ಶಿಯಾಗಿ ಸುರೇಖಾ ಮಲ್ಲಾಡದ, ಖಜಾಂಚಿಯಾಗಿ ಸಹನಾ ಹಿರೇಮಠ ಅಧಿಕಾರ ವಹಿಸಿಕೊಂಡರು.

ಕನಿಷ್ಕ ಸುಲಾಖೆ ಪ್ರಾರ್ಥಿಸಿದರು. ನಿತೀಶ್ ಸಾಲಿ ಸ್ವಾಗತಿಸಿದರು, ಸಾವಿತ್ರಿ ಶಿಗ್ಲಿ ಹಾಗೂ ವೀಣಾ ಸುಲಾಖೆ ನಿರೂಪಿಸಿದರು. ರಾಜಣ್ಣ ಮಲ್ಲಾಡದ ವಂದಿಸಿದರು. ಕಾರ್ಯಕ್ರಮದಲ್ಲಿ ಕ್ಲಬ್‌ನ ಸರ್ವ ಸದಸ್ಯರು, ಗಣ್ಯರು ಪಾಲ್ಗೊಂಡಿದ್ದರು.


ಕರ್ನಾಟಕ ಸರಕಾರ
**ಜಿಲ್ಲಾ ಪಂಚಾಯತ, ಗದಗ.**
**ಕಾರ್ಯನಿರ್ವಾಹಕ ಇಂಜಿನೀಯರ, ಪಂ.ರಾಜ್.ಇಂ. ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ್/2025-26/1176 ದಿನಾಂಕ : 08-07-2025

**ಕೆಪಿಪಿ ಪೋರ್ಟಲ್ ಅಲ್ಪಾವಧಿ ಟೆಂಡರ್ ಪ್ರಕಟಣೆ**
**Standard Bid Document KW-1**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆ್ಯಕ್ಟ್-2000 ನಿಯಮದಂತೆ Standard Bid Document KW-1 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 6 ಕಾಮಗಾರಿಗಳ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25 ನೇ ಸಾಲಿನ ಪ್ರಗತಿ ಕಾಲೋನಿ ಎಸ್.ಸಿ/ಎಸ್.ಟಿ ಯೋಜನೆಯಡಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**Indent Nos: 1) WORK_INDENT : 16785,16786,16787,16788,16790,16789,**

ಟೆಂಡರ್‌ಗಿಟ್ಟ ಕನಿಷ್ಠ ಮೊತ್ತ **ರೂ. 5.77** ಲಕ್ಷ ಮತ್ತು ಗರಿಷ್ಠ ಮೊತ್ತ **ರೂ. 15.91** ಲಕ್ಷಗಳು ಟೆಂಡರ್ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ:- ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರ್‌ಮೆಂಟ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಸಲ್ಲಿಸುವ **ದಿನಾಂಕ: 09-07-2025 ರಿಂದ 24-07-2025 ರಂದು 16.00** ಗಂಟೆಯವರೆಗೆ. ಟೆಂಡರ್ ತೆರೆಯುವ **ದಿನಾಂಕ : 25-07-2025 ರಂದು 16.30** ಗಂಟೆಗೆ ತೆರೆಯಲಾಗುವುದು. ಟೆಂಡರ್‌ನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ನಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ : 13 ರಂತೆ) ಭರಣಾ ಮಾಡಬೇಕು. ಇ-ಪದ್ದತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,**
**ಪಂ.ರಾಜ್.ಇಂಜಿನೀಯರಿಂಗ್ ವಿಭಾಗ, ಗದಗ.**

ವಾ.ಸಾ.ಇ/ಗದಗ/169/ದೇಶಪಾಂಡೆಪಬ್ಲಿಸಿಟಿ/2025-26


# ಜೀವನಕ್ಕೆ ನಿಜಾರ್ಥವನ್ನು ನೀಡುವವನೇ ಗುರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯಾವುದೇ ವ್ಯಕ್ತಿ ಸಮಾಜದಲ್ಲಿ ಬೆಳೆದು ನಿಲ್ಲಬೇಕಾದರೆ ಅವನಿಗೆ ಗುರುವಿನ ಆಶೀರ್ವಾದ ಅವಶ್ಯವಾಗಿರುತ್ತದೆ. ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕುತಿ ಎಂಬ ನುಡಿ ಅಕ್ಷರಶಃ ಸತ್ಯವಾಗಿದ್ದು, ಜೀವನಕ್ಕೆ ನಿಜ ಅರ್ಥವನ್ನು ನೀಡುವವನೇ ಗುರುವಾಗಿರುತ್ತಾನೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ನುಡಿದರು.

ಅವರು ಮುಕ್ತಿಮಂದಿರಲ್ಲಿ ಬಿಜೆಪಿ ವತಿಯಿಂದ ಗುರುವಾರ ಗುರುಪೌರ್ಣಿಮೆ ಆಚರಣೆ ನಿಮಿತ್ತ ಪಕ್ಷದ ಮುಖಂಡರು ನೀಡಿದ ಗೌರವ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು.

ಜೀವನದಲ್ಲಿ ಪೋಷಕರ ಪಾತ್ರ ಎಷ್ಟಿದೆಯೋ, ಅಷ್ಟೇ ಗುರುಗಳ ಪಾತ್ರವೂ ಇದೆ. ನಮ್ಮಲ್ಲಿರುವ ಅಂಧಕಾರವನ್ನು ದೂರಮಾಡಿ, ಜ್ಞಾನವೆಂಬ ಬೆಳಕನ್ನು ನೀಡುವ ಮಹಾನ್ ಶಕ್ತಿಯೇ ಗುರುವಾಗಿರುತ್ತಾನೆ. ಇಂತಹ ಮಹತ್ವದ ಗುರುವಿನ ಸ್ಥಾನಕ್ಕೆ ಆಗಮಿಸಿ ಗುರುಪೌರ್ಣಿಮೆ ಆಚರಿಸಿದ್ದು ಸಾರ್ಥಕತೆಯಾಗಿದೆ ಎಂದು ನುಡಿದರು.

ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಮಾತನಾಡಿ, ಬದುಕಲ್ಲಿ ಏನಾದರೂ ಸಾಧಿಸಬೇಕೆಂದರೆ ಗುರುವಿನ ಮಾರ್ಗದರ್ಶನ ಬೇಕೇ ಬೇಕು. ಇಂತಹ ಗುರುವಿಗೆ ನಮನ ಸಲ್ಲಿಸುವ ದಿನವೇ ಗುರುಪೂರ್ಣಿಮೆ. ಪಕ್ಷದ ನಿರ್ದೇಶನದಂತೆ ರಾಜ್ಯಾದ್ಯಂತ ಗುರುಪೌರ್ಣಿಮೆ ಕಾರ್ಯಕ್ರಮದ ಮೂಲಕ ಗುರುವನ್ನು ಗೌರವಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಶ್ರೀಗಳ ಆಶೀರ್ವಾದ ಸದಾ ಈ ಸಮಾಜಕ್ಕೆ ದೊರೆಯಲಿ ಎಂದು ಪ್ರಾರ್ಥಿಸುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ನಿಂಗಪ್ಪ ಬನ್ನಿ, ಎಂ.ಆರ್. ಪಾಟೀಲ, ಶಕ್ತಿ ಕತ್ತಿ, ಅನಿಲ ಮುಳಗುಂದ, ಬಸವರಾಜ ಚಕ್ರಸಾಲಿ ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka